EMAIL : dairyadadaari@gmail.com ಸಂಪುಟ: 01 ಸಂಚಿಕೆ: 17
ಬೆಲೆ ರೂ : 2.00
ರಾಯಚೂರು
ಪುಟ: 4
ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಭಾನುವಾರ: 21-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಟಿ.20 ವಿಶ್ವಕಪ್‌ಗೆ ಭಾರತದ ತಂಡ ಪ್ರಕಟ, ಸೂರ್ಯ ಕುಮಾರ್ ಯಾದವ್ ಕ್ಯಾಪ್ಟನ್

**ನವದೆಹಲಿ,ಡಿ.20–** ಮುಂಬರುವ ಟಿ.20 ವಿಶ್ವಕಪ್‌ಗೆ ಭಾರತ ತಂಡವನ್ನು ಸೂರ್ಯ ಕುಮಾರ್ ಯಾದವ್ ಮುನ್ನಡೆಸುತ್ತಿದ್ದು, ಉಪನಾಯಕನಾಗಿ ಅಕ್ಷರ್ ಪಟೇಲ್ ಅವರನ್ನು ನೇಮಿಸಲಾಗಿದೆ. ಗಾಯದ ಸಮಸ್ಯೆಯಿಂದ ಬಳಲುತ್ತಿರುವ ಶುಭ್‌ಮನ್ ಗಿಲ್‌ಅವರನ್ನು ತಂಡದಲ್ಲಿ ಸೇರಿಸಲಾಗಿಲ್ಲ. ಇನ್ ಫಾರ್ಮ್ ಬ್ಯಾಟ್ಸ್‌ಮನ್ ಇಶಾನ್ ಕಿಶನ್ ಮತ್ತು ರಿಂಕು ಸಿಂಗ್ ಅವರು ತಂಡಕ್ಕೆ ಮರಳಿದ್ದಾರೆ.

ಶುಭ್‌ಮನ್ ಗಿಲ್ ಸದ್ಯ ಲಯ ಕಳೆದುಕೊಂಡಿದ್ದಾರೆ ಹಾಗಗಿ ಅವರನ್ನು ಪರಿಗಣಿಸಿಲ್ಲ ಎಂದು ಆಯ್ಕೆ ಸಮಿತಿ ಅಧ್ಯಕ್ಷ ಅಜೀತ್ ಅಗರ್‌ಕರ್ ತಿಳಿಸಿದ್ದಾರೆ.ತವರಿನಲ್ಲಿ ಪ್ರೇಕ್ಷಕರ ಮುಂದೆ ಆಡುವುದು ಒಳ್ಳೆಯ ಜವಾಬ್ದಾರಿ ಮತ್ತು ಸವಾಲು. ತಂಡ ಸಮತೋಲಿತವಾಗಿ ಕಾಣುತ್ತಿದೆ ಎಂದು ಭಾರತ ತಂಡದ ನಾಯಕ ಸೂರ್ಯಕುಮಾರ್ ಯಾದವ್ ಹೇಳಿದ್ದಾರೆ.

ಸಂಜು ಸ್ಯಾಮ್ಸನ್ ನಂತರ ಜಿತೇಶ್ ಶರ್ಮಾ ಅವರನ್ನು ಎರಡನೇ ವಿಕೆಟ್ ಕೀಪರ್ ಆಗಿ ಆಯ್ಕೆ ಮಾಡಲಾಗಿದೆ.**ತಂಡ: ಸೂರ್ಯಕುಮಾರ್ ಯಾದವ್ (ನಾಯಕ), ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅಕ್ಷರ್ ಪಟೇಲ್ (ವಿಸಿ), ಕುಲದೀಪ್ ಯಾದವ್, ಜಸ್ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್, ಹರ್ಷಿತ್ ರಾಣಾ, ಸಂಜು ಸ್ಯಾಮ್ಸನ್,ವಾಷಿಂಗ್ಟನ್ ಸುಂದರ್, ವರುಣ್ ಚಕ್ರವರ್ತಿ,ಇಶಾನ್**

# ಕೇಂದ್ರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

**ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾಗಾಂಧಿ, ರಾಹುಲ್‌ಗಾಂಧಿ ವಿರುದ್ಧ ಬಿಜೆಪಿ ನಾಯಕರು ಮಾಡುತ್ತಿರುವ ಪಿತೂರಿ ಹಾಗೂ ಕಾನೂನು ಬಾಹಿರ ಪ್ರಕರಣ ಎಂದು ಸಾಬೀತಾದ ಹಿನ್ನಲೆ ಕೆಪಿಸಿಸಿ ವತಿಯಿಂದ ಇಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು.**

**ಪಕ್ಷದ ಅಧ್ಯಕ್ಷ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಂಎಲ್‌ಸಿ ಬಿ.ಕೆ.ಹರಿಪ್ರಸಾದ್, ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಉದಯಶಂಕರ್ ಸೇರಿದಂತೆ ಪಕ್ಷದ ಹಲವಾರು ಮುಖಂಡರು ಭಾಗವಹಿಸಿದ್ದರು.**

**ಬೆಂಗಳೂರು,ಡಿ.20–** ದೇಶದ ಸಾಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗ ಮಾಡಿಕೊಂಡು ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರ ವಿರುದ್ಧ ಕೇಂದ್ರ ಸರ್ಕಾರ ದ್ವೇಷ ರಾಜಕಾರಣ ಮಾಡುತ್ತಿದೆ ಎಂದು ಆರೋಪಿ ಕಾಂಗ್ರೆಸ್ ನಗರದಲ್ಲಿಂದು ಬೃಹತ್ ಪ್ರತಿಭಟನೆ ನಡೆಸಿತು.

ನಗರ ಸ್ವಾತಂತ್ರ್ಯ ಉದ್ಯಾನವನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ , ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸತ್ಯಮೇವ ಜಯತೆ ಪ್ರತಿಭಟನೆಯಲ್ಲಿ ಕೇಂದ್ರ ಸರ್ಕಾರ ಮತ್ತು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ನಾಯಕರು ವಾಗ್ದಾಳಿ ನಡೆಸಿ ದ್ವೇಷ ರಾಜರಾಜಕಾರಣ ಹೆಚ್ಚು ದಿನನಡೆಯುವುದಿಲ್ಲ ಸತ್ಯಕ್ಕೆ ಜಯ ಸಿಗಲಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಮಾತನಾಡಿ, ಬಿಜೆಪಿ ನೇತೃತ್ವ ಕೇಂದ್ರ ಸರ್ಕಾರ ದ್ವೇಷದ ರಾಜಕಾರಣ ಮಾಡುವ ಮೂಲಕ



ರಾಜಕಾರಣದ ಕೊನೆಗಾಲದಲ್ಲಿದೆ ಎಂದು ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರ ಮೇಲೆ ಕೇಂದ್ರ ಸರ್ಕಾರ ಸುಳ್ಳು ಆರೋಪ ವರಿಸಿದ್ದರು ಕೂಡ ಸತ್ಯಕ್ಕೆ ಜಯ ಸಿಗಲಿದೆ. ದೇಶದಲ್ಲಿ ದ್ವೇಷ ರಾಜಕಾರಣ ಹೆಚ್ಚು ದಿನ ನಡೆಯುವುದಿಲ್ಲ ಎಂದು ನಾಯಕರು ಗುಡುಗಿದರು.

ಜಾರಿ ನಿರ್ದೇಶನಾಲಯ ದುರ್ಬಳಕೆ ಮಾಡಿಕೊಳ್ಳುವ ಮೂಲಕ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿದೆ ಇದರ ವಿರುದ್ಧ ಹೋರಾಟ ನಡಸಲಾಗುತ್ತಿದೆ ಎಂದು ಹೇಳಿದರು.

ಗ್ರಾಮೀಣ ಭಾಗದ ಕೂಲಿ ಕಾರ್ಮಿಕರ ಆರ್ಥಿಕ ಪ್ರಗತಿಗೆ ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ನರೇಗಾ ಹೆಸರು ಬದಲಾವಣೆ ಮಾಡುವ ಮೂಲಕ ಗ್ರಾಮೀಣ ಜನರ ಬದುಕಿನ ಮೇಲೆ ಗದಾಪ್ರಹಾರ ನಡೆಸುತ್ತಿದೆ ಎಂದು ಆರೋಪಿಸಿದರು.

ನರೇಗಾ ಹೆಸರು ಬದಲಿಸಿ ಮಹಾತ್ಮ ಗಾಂಧಿಜೀಯವರಿಗೆ ಅಪಮಾನ ಮಾಡಲಾಗಿದೆ. ಈ ಮೂಲಕ ಬಡಜನರ ಹಕ್ಕುಗಳನ್ನು ಕಸಿಯುವ ಪ್ರಯತ್ನ ನಡೆಸಿದೆ ಎಂದು ಹೇಳಿದರು

ಸೋನಿಯಾಗಾಂಧಿ ಅವರು ಪ್ರಧಾನಿ ಹುದ್ದೆಯನ್ನು ತ್ಯಾಗ ಮಾಡುವ ಮೂಲಕ ರಾಜಕಾರಣ ಮಾಡಿದ ಅವರ ಕುಟುಂಬದ ಮೇಲೆ ಬಿಜೆಪಿ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಹರಿಹಾಯ್ದಿರು.

ದೇಶದ ಹಲವು ರಾಜ್ಯಗಳಲ್ಲಿ ಮತಗಳವು ನಡೆದಿದೆ.ಮತಗಳವಿನಲ್ಲಿ ಕೇಂದ್ರ ಸರ್ಕಾರ, ಕೇಂದ್ರ ಚುನಾವಣಾ ಆಯೋಗದ ಜೊತೆ ಶಾಮೀಲಾಗಿದೆ ಎಂದು ಆರೋಪಿಸಿದ ನಾಯಕರು, ಮಂಬರುವ ದಿನಗಳಗಲ್ಲಿ ಕಾಂಗ್ರೆಸ್ ಹೋರಾಟ ತೀವ್ರಗೊಳಿಸಲಿದೆ ಎಂದು ಎಚ್ಚರಿಕೆ ನೀಡಿದರು.

ಕಳೆದವಾರ ದೆಹಲಿಯ ರಾಮಲೀಲಾ ಮೈದಾನದಲ್ಲಿ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯ ಕಾಂಗ್ರೆಸ್ ನಾಯಕರು ಭಾಗವಹಿಸಿದ್ದರು. ಇದರ ಬೆನ್ನಲ್ಲೇ ಬೆಂಗಳೂರಿನಲ್ಲಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತು.

ಇಂದು ನಡೆದಪ್ರತಿಭಟನೆಯಲ್ಲಿ ಕಾರ್ಯಾಧ್ಯಕ್ಷ ಜಿ ಸಿ ಚಂದ್ರಶೇಖರ್. ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್ ಮಯೂರ್ ಜೈಕುಮಾರ್, ವಿಧಾನ ಪರಿಷತ್ ಸದಸ್ಯರಾದ ಬಿ.ಕೆ. ಹರಿಪ್ರಸಾದ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎ.ಚ್.ಎಂ ರೇವಣ್ಣ, ಗುಜರಾತ್ ಉಸ್ತುವಾರಿಯಾಗಿರುವ ಶ್ರೀನಿವಾಸ್ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಸೌಮ್ಯ ರೆಡ್ಡಿ, ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥಗೌಡ ಮತ್ತಿತರ ಹಿರಿಯ ಮುಖಂಡರು ಉಪಸ್ಥಿತರಿದ್ದರು

### ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಎಡಿಸಿ ಸೂಚನೆ

# ಪ್ರತಿ ಮಗುವಿಗೂ ಪಲ್ಸ್ ಪೋಲಿಯೊ ಲಸಿಕೆ ಸಿಗಬೇಕು



ಧೈರ್ಯದ ದಾರಿ

**ರಾಯಚೂರು,ಡಿ.20–**ಜಿಲ್ಲೆಯಲ್ಲಿ ಡಿಸೆಂಬರ್ 21ರಿಂದ ಡಿಸೆಂಬರ್ 24ರವರೆಗೆ ನಿಗದಿಯಾದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಯಾವುದೇ ಮಗು ಲಸಿಕೆಯಿಂದ ವಂಚಿತ'ವಾಗದಂತೆ ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು. ಡಿಸೆಂಬರ್ 20ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಎರಡನೇ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ 1132 ಕೇಂದ್ರ್ರಗಳನ್ನು ತೆರೆಯಲಾಗಿದ್ದು, ಸುಮಾರು 2,59,984 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಜಿಲ್ಲೆ ಯಲ್ಲಿ ಪಲ್ಸ್ ಪೋಲಿಯೋ ಕಾರ್ಯ ಕ್ರಮವನ್ನು ಯಶಸ್ವಿಗೊಳಿಸಲು ಸಂಘ ಸಂಸ್ಥೆಗಳು ವಿವಿಧ ಇಲಾಖೆಗಳ ಸಹಕಾರ ಅಗತ್ಯವಿರುವದರಿಂದ ಎಲ್ಲರೂ ಆರೋಗ್ಯ ಇಲಾಖೆಗೆ ಸಹಕಾರ ನೀಡಬೇಕು ಎಂದರು.

ಪೋಲಿಯೋ ಲಸಿಕಾ ಅಭಿಯಾನಕ್ಕೆ ನಿಯೋಜನೆಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಆಶಾ ಕಾರ್ಯಕರ್ತೆಯರು ತಮಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸ ಬೇಕು. ಡಿ.21ರಿಂದ ಗೊತ್ತುಪಡಿಸಿರುವ ಲಸಿಕಾ ಕೇಂದ್ರಗಳಲ್ಲಿ 5 ವರ್ಷದ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆಯನ್ನು ನೀಡಲು ಕ್ರಮವಹಿಸಬೇಕು. ಮನೆಮನೆ ಭೇಟಿ ಮೂಲಕವು ಸಹ ಆರೋಗ್ಯ ಕಾರ್ಯ ಕರ್ತರು 5 ವರ್ಷದ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಿದ್ದಾರೆ. ಸಾರ್ವಜ ನಿಕರು ಲಸಿಕಾ ಅಭಿಯಾನದ ಸದುಪ 'ಯೋಗ ಪಡೆದುಕೊಳ್ಳಬೇಕು ಎಂದರು.

1132 ಲಸಿಕಾ ಬೂತ್‌ಗಳ ಸ್ಥಾಪನೆ: ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಅವರು ಮಾತನಾಡಿ, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 143, ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ 140, ಲಿಂಗಸುಗೂರು ತಾಲೂಕಿನಲಿ 211, ಮಾನ್ವಿ ತಾಲೂಕಿನಲ್ಲಿ 221, ಸಿಂಧನೂರು. ತಾಲೂಕಿನಲ್ಲಿ 248, ರಾಯಚೂರು ಗ್ರಾಮೀಣ ಭಾಗದಲ್ಲಿ 169 ಸೇರಿದಂತೆ ಜಿಲ್ಲಾದ್ಯಂತ 1132 ಬೂತ್ ಗಳನ್ನು ಸ್ಥಾಪಿಸಲಾಗಿದೆ. ಲಸಿಕಾ 2ನೇಪುಟಕ್ಕೆ►

## ಡಿಸೆಂಬರ್ 21ರವರೆಗೆ ಬೆಳಗಿನ ಜಾವ ತೀವ್ರ ಶೀತ ಗಾಳಿ ಬೀಸುವ ಸಾಧ್ಯತೆ, ಸಾರ್ವಜನಿಕರಿಗೆ ಮುಂಜಾಗ್ರತಾ ಸಲಹೆಗಳು

ಧೈರ್ಯದ ದಾರಿ

**ರಾಯಚೂರು ಡಿ,20–**ಭಾರತೀಯ ಹವಾಮಾನ ಇಲಾಖೆಯ ವರದಿಯಂತೆ ಡಿಸೆಂಬರ್ 20 ರಿಂದ 21ರವರೆಗೆ ರಾಯಚೂರು ಜಿಲ್ಲೆಯಾದ್ಯಂತ ಬೆಳಗಿನ ಜಾವ ತೀವ್ರವಾದ ಶೀತ ಗಾಳಿ ಬೀಸುವ ಸಾಧ್ಯತೆಯಿರುತ್ತದೆ. ಹಾಗೂ ಸಾಮಾನ್ಯ ತಾಪಮಾನಕ್ಕಿಂತ 4–6 ಡಿಗ್ರಿ ಸೆಲ್ಸಿಯಸ್ ನಷ್ಟು ಕಡಿಮೆ ಆಗುವ ಸಾಧ್ಯತೆರುವ ಕಾರಣ ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಲಹೆ ಮಾಡಿದ್ದಾರೆ.

ಸಾರ್ವಜನಿಕರು ಮುಂಜಾಗ್ರತಾ ಕ್ರಮವಾಗಿ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸಲಹೆಗಳನ್ನು ಪಾಲನೆ ಮಾಡಬೇಕು.

ಏನು ಮಾಡಬೇಕು: ಸಾರ್ವಜನಿಕರು ಬೆಳಗ್ಗೆ ಸೂರ್ಯೋದಯಕ್ಕಿಂತ ಮುಂಚೆ ಹಾಗೂ ಸೂರ್ಯಾಸ್ತದ ನಂತರ ವಾಕಿಂಗ್ ಬರುವಾಗ ಮುನ್ನೆಚ್ಚರಿಕೆ ವಹಿಸಿಬೇಕು. ಸಾಧ್ಯವಾದಷ್ಟು ಮನೆ ಬಿಟ್ಟು ಹೊರಗಡೆ ಬರಬಾರದು. ಒಂದು ವೇಳೆ ಅವಶ್ಯವಿದ್ದಲ್ಲಿ ಬೆಚ್ಚನೆಯ ಉಡುಪುಗಳಾದ ಸ್ವೇಟರ್, ಜಾಕೇಟ್, ಉಲನ್ ಟೋಪಿ, ಕಾಲುಕುಬುಸ, ಕೈಗವ ಧರಿಸಬೇಕು. ಹಿರಿಯರಿಗೆ ಹಾಗೂ ಮಕ್ಕಳನ್ನು ಅನವಶ್ಯಕವಾಗಿ ಮನೆಯಿಂದ ಹೊರಗಡೆ ಬಿಡದಿರಲು ಹಾಗೂ ಅವರ ಆರೋಗ್ಯದ ಕಡೆ ಗಮನ ಹರಿಸಬೇಕು.

ಜ್ವರ, ಉಸಿರು ಕಟ್ಟಿಕೊಳ್ಳುವ, ಮೂಗು ಅಥವಾ ಮೂಗಿನ ರಕ್ತಸ್ರಾವದಂತಹ ವಿವಿಧ ಕಾಯಿಲೆಗಳು ಹೆಚ್ಚಿನ ಸಂಭವನಿಯತೆಯು ಸಾಮಾನ್ಯವಾಗಿ ಶೀತಕ್ಕೆ ಧೀರ್ಘಕಾಲದವರೆಗೆ ಒಡ್ಡಿಕೊಳ್ಳುವುದರಿಂದ ಉಲ್ಬಣಗೊಳ್ಳುತ್ತದೆ. ಈ ರೀತಿಯ ರೋಗಲಕ್ಷಣಗಳಿಗಾಗಿ ವೈದ್ಯರನ್ನು 2ನೇಪುಟಕ್ಕೆ►

## ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ವತಿಯಿಂದ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಬೆಡ್ ಶೀಟ್ ಗಳನ್ನು ಹಂಚುವ ಕಾರ್ಯಕ್ರಮ



ಧೈರ್ಯದ ದಾರಿ

**ಮಾನ್ವಿ,ಡಿ.20–** ಪಟ್ಟಣದ ಕಲ್ಯಾಣ ಕರ್ನಾಟಕ ಸಾರಿಗೆ ಇಲಾಖೆಯ ಬಸ್ ನಿಲ್ದಾಣದ ಆವರಣದಲ್ಲಿ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ವತಿಯಿಂದ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ನಡೆದ ಸಮಾಜಸೇವ ಕಾರ್ಯಕ್ರಮಕ್ಕೆ ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಮಾತನಾಡಿ ಜಗತ್ತಿನ ಎಲ್ಲಾ ಧರ್ಮಗಳು ಮನುಷ್ಯರನ್ನು ದುಖಃದಿಂದ ಪಾರು ಮಾಡುವುದಕ್ಕಾಗಿಯೇ ವಿವಿಧ ಧರ್ಮಗಳು ಹುಟ್ಟಿದವು ನಾಡಿನ ಅನೇಕ ಮಹಾತ್ಮರು ತಮಗಾಗಿ ಬದುಕದೆ ಜಾತಿ,ಧರ್ಮ,ಬೇದವಿಲ್ಲದೆ ಎಲ್ಲಾ ಧರ್ಮದ ದಿನದಲಿತರ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಅದರಂತೆ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ವತಿಯಿಂದ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಬಡವರಿಗೆ ಅನ್ನದಾನ ಹಾಗೂ ಬೆಡ್ ಶೀಟ್ ಗಳನ್ನು ವಿತರಿಸುವ ಮೂಲಕ ಸಂಸ್ಥೆಯ ಅಧ್ಯಕ್ಷರಾದ ಹನುಮಂತಕೋಟೆಯವರು ನಿರಂತರವಾಗಿ ಜನಸೇವೆಯನ್ನು ಮಾಡುತ್ತ ಬಂದಿದ್ದಾರೆ ಅವರಿಗೆ ಶ್ರೀಮಠದ ವತಿಯಿಂದ ನಿರಂತರವಾಗಿ ಸಹಕಾರವನ್ನು ನೀಡುತ್ತ ಬಂದಿದೇವೆ ಪ್ರತಿಯೊಬ್ಬರು ಕೂಡ ಧರ್ಮದ ಹೆಸರಿನಲ್ಲಿ ಸಮಾಜದ ಸ್ವಸ್ಥ ವನ್ನು ಕದಡುವ ಕೇಲಸವನ್ನು ಮಾಡದೆ ಎಲ್ಲಾ ಜನರು ಕೂಡಿ ಕೊಂಡು ಸಮಾಜ ಮುಖಿಯಾದ ಕಾರ್ಯಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜದಲ್ಲಿ ಶಾಂತಿ ಸೌಹಾರ್ಧತೆ ಮೂಡಿಸುವ ಕಾರ್ಯವನ್ನು ಮಾಡಬೇಕು ಎಂದು ತಿಳಿಸಿದರು.

ಪಟ್ಟಣದ ಬಸ್ ನಿಲ್ದಾಣದಲ್ಲಿನ ವೃದ್ದರಿಗೆ ಹಾಗೂ ಅಂಗವಿಕಲರಿಗೆ , ಅನಾಥರಿಗೆ ಚಳಿ ಹೆಚ್ಚಾಗಿರುವ ಕಾರಣ ಬೆಡ್ ಶೀಟ್ ಗಳನ್ನು , ವಸ್ತ್ರಗಳನ್ನು ವಿತರಿಸಲಾಯಿತು. ಬಡಜನರಿಗೆ ಅನ್ನದಾನ ಕಾರ್ಯಕ್ರಮ ಕೂಡ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಸ್ಲಿಂ ಧರ್ಮದ ಗುರುಗಳಾದ ಸೈಯದ್ ಶಾಹ ಸಜ್ಜದ್ ಹುಸೇನಿ ಮತ್ವಲೇ, ತುಮಕುರಿನ ಫಾ.ಜಾಯ್ ಕೆ.ಪೀಟರ್ ಮಾರೇಶ ಫಾಸ್ಟರ್, ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಹನುಮಂತ ಕೋಟೆ, ಈರೇಶ್ ಹುಲಿಗುಂಚಿ,ಹನುಮಂತ ಜೆ.ಸಿರವಾರ, ಶರಣು ಮುದ್ದನಗುಡ್ಡಿ,ಭಾರತೀಯ ಸೇವಾ ಸಮಿತಿ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾದ ಸಾಹೀರಭಾನು, ಗುಲಾಂ ಹುಸೇನ್, ತಾ. ಟೈಲರ್ ಸಂಘದ ಅಧ್ಯಕ್ಷರಾದ ಮೆಹಬೂಬ್‌ಸೇರಿದಂತೆ ಇನ್ನಿತರರು ಇದ್ದರು.

## 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ– ಮುಖ್ಯ ಶಿಕ್ಷಕ ಗುಂಡಯ್ಯ ನಾಯಕ



ಧೈರ್ಯದ ದಾರಿ

**ಮಾನ್ವಿ,ಡಿ.20–**ಪಲ್ಸ್ ಪೋಲಿಯೊ ಲಸಿಕೆ ಅಭಿಯಾನದಡಿ ಡಿ.21 ರಿಂದ 24ರವರೆಗೆ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸಬೇಕೆಂದು ಎಂದು ಶಾಲೆಯ ಮುಖ್ಯ ಶಿಕ್ಷಕ ಗುಂಡಯ್ಯ ನಾಯಕ ಅವರು ತಿಳಿಸಿದರು. ಅವರಿಂದು ತಾಲೂಕಿನ ಪೋತ್ನಾಳ ಗ್ರಾಮದ ಜನತಾ ಕಾಲೊನಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಜಾಗೃತಿ ಕುರಿತು ಮಾತನಾಡಿದರು.ಪ್ರಸಕ್ತ ಸಾಲಿನ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ನಿಯೋಜನಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ತಮಗೆ ವಹಿಸಿದ ಕೆಲಸ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸೂಚಿಸಿದರು.

**ಲಸಿಕೆ ಜಾಗೃತಿ:**ಗ್ರಾಮದ ವಿವಿಧ ಪ್ರದೇಶ ದಲ್ಲಿ ತಮ್ಮ ವ್ಯಾಪ್ತಿಯಲ್ಲಿನ 5 ವರ್ಷದೊ ಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸುವ ಕುರಿತು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಸಹ ಶಿಕ್ಷಕಿ ಎಂ, ಗೀತಾ,ಛಾಯರಾಣಿ, ಅತಿಥಿ ಶಿಕ್ಷಕಿಯರಾದ ರೇಖಾ, ಗಂಗಮ್ಮ,ಅಂಗನವಾಡಿ ಟೀಚರ್ ಲಕ್ಷ್ಮೀ , ಆಶಾಕಾರ್ಯಕರ್ತೆ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸರಕಾರಿ ಮೆಡಿಕಲ್ ಕಾಲೇಜ್ ಸ್ಥಾಪನೆಗೆ ನಾಡಿನ ಹಿರಿಯ ಚಿಂತಕರ ಆಗ್ರಹ




**ವಿಜಯಪುರ, ಡಿ. 20:** ಜಿಲ್ಲೆಯಲ್ಲಿ ಸಕಲ ಸೌಲಭ್ಯ ಇರುವ ಸರಕಾರಿ ಆಸ್ಪತ್ರೆ ವ್ಯವಸ್ಥೆ ಇದೆ. ಆದಾಗ್ಯೂ ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆ ಸ್ಥಾಪಿಸದೇ ಬಡ ಜನರಿಗೆ ಸರ್ಕಾರ ಮೋಸ ಮಾಡುತ್ತಿದೆ ಎಂದು ಹಿರಿಯ ಸಮಾಜವಾದಿ ಮುಖಂಡ ಡಾ. ಸಿದ್ದನಗೌಡ ಪಾಟೀಲ ಟೀಕಿಸಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ನಡೆಯುತ್ತಿರುವ ಅನಿರ್ದಿಷ್ಟ ಅಹೋರಾತ್ರಿ ಧರಣಿ ವೇದಿಕೆಯಲ್ಲಿ ಹೋರಾಟ ಬೆಂಬಲಿಸಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ವಿಜಯಪುರ ಆ ಕಾಲದಲ್ಲಿಯೇ ರಾಜಧಾನಿ ಆಗಿರುವುದು ಇಲ್ಲಿ ಮೆಡಿಕಲ್ ಕಾಲೇಜ್ ಮಾಡಲಿಕ್ಕೆ ನಿಮಗೆ ಏನು ತೊಂದರೆ ಎಂದು ಹಿರಿಯ ಸಮಾಜವಾದಿ ಧುರೀಣ ಪಾಟೀಲ ಪ್ರಶ್ನಿಸಿದರು.

ಸಚಿವ ಎಂ.ಬಿ. ಪಾಟೀಲರೇ ನೀವು ಕೈಗಾರಿಕಾ ಮಂತ್ರಿ ಆಗಿರಿ. ಆದರೆ ನೀವು ಬಂಡವಾಳಶಾಹಿಗಳ ಗುಲಾಮರಾಗಬೇಡಿ. ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಮೂಲಕ ಜಿಲ್ಲೆಗೆ ನ್ಯಾಯ ದೊರಕಿಸಿಕೊಡಬೇಕು ಎಂದರು. ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಬಂಡವಾಳ ಶಾಹಿಗಳ ಕಪಿಮುಷ್ಠಿಗೆ ಹೋಗಲು ಹೋರಾಟಗಾರರು ಬಿಡುವುದಿಲ್ಲ ಎಂದರು.

ಮುಖ್ಯಮಂತ್ರಿಗಳ ನವೆಂಬರ್ 19ರ ಅಧಿಕೃತ ಕಾರ್ಯಕ್ರಮದ ಪಟ್ಟಿಯಲ್ಲಿ ನಿಯೋಗದ ಭೇಟಿ ಇರಲಿಲ್ಲ. ನಿಯೋಗ ನಿಗದಿ ಆಗದ ಕಾರಣ ಅದು ವಿಫಲವಾಗಿದೆ. ಪಿಪಿಪಿ ಮಾದರಿ ಜಾರಿಯಲ್ಲಿ ಎಲ್ಲ ಪಕ್ಷಗಳ ಪಾತ್ರವಿದೆ. ರಾಜಕಾರಣಿಗಳ ಹಿತಾಸಕ್ತಿ ಬಂದರೆ ಎಲ್ಲರೂ ಒಂದೇ ಜಿಲ್ಲೆಯ ರಾಜಕಾರಣಿಗಳು ಒಳ ಒಪ್ಪಂದದಿಂದ ಸರಕಾರಿ ಆಸ್ಪತ್ರೆ ಕಳೆದುಕೊಳ್ಳುವ ಸಂಭವ ಬಂದಿದೆ. ರಾಜಕಾರಣಿಗಳಿಗೆ ನಮಗೆ ರಾಜಕೀಯವಾಗಿ ಪೆಟ್ಟು ಕೊಡುತ್ತದೆ ಎಂದು ಗೊತ್ತಾದಾಗ ಮಾತ್ರ ಈ ಬೇಡಿಕೆ ಈಡೇರುತ್ತದೆ. ಜೊತೆಗೆ ಅಧಿವೇಶನ ಮುಗಿದ ತಕ್ಷಣ ಸಿಎಂ ಸಿದ್ದರಾಮಯ್ಯ ಮತ್ತು ಸಚಿವ ಎಂಬಿ ಪಾಟೀಲರಿಗೆ ಭೇಟಿಯಾಗಿ ಮನವಿ ಮಾಡುತ್ತೇವೆ ಎಂದು ತಿಳಿಸಿದರು.

ಕೆರೆ ತುಂಬುವಲ್ಲಿ ಗಳಿಸಿದ ಹೆಸರು ಆಸ್ಪತ್ರೆಯಲ್ಲಿ ಕಳೆದುಕೊಳ್ಳಬೇಡಿ ಎಂದು ಸಚಿವ ಎಂ.ಬಿ. ಪಾಟೀಲರಿಗೆ ಕಿವಿಮಾತು ಹೇಳುವ ಮೂಲಕ ಈ ಹೋರಾಟ ಯಾವುದೇ ರಾಜಕಾರಣಿಗಳ ವಿರುದ್ಧವಲ್ಲ. ಜಿಲ್ಲೆಯ ಸಚಿವರು, ಶಾಸಕರು ಆಸ್ಪತ್ರೆಕೊಳ್ಳಲು ಹುನ್ನಾರ ಮಾಡುತ್ತಿದ್ದಾರೆ ಎಂಬ ಭಾವನೆ ಜಿಲ್ಲೆಯ ಜನರ ಮನದಲ್ಲಿ ಮನೆ ಮಾಡಿದೆ. ಕೂಡಲೇ ವಿಜಯಪುರ ಜಿಲ್ಲೆಗೆ ಸರಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಬೇಕು ಎಂದು ಆಗ್ರಹಿಸಿದರು.

ಹಂಪಿ ವಿವಿ ಯ ವಿಶ್ರಾಂತ ಕುಲಪತಿ ಡಾ.ಮಲ್ಲಿಕಾ ಘಂಟಿ ಅವರು ಮಾತನಾಡಿ, ಸರಕಾರದ ವಿರುದ್ಧ ಸುದೀರ್ಘ ಹೋರಾಟ ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ. ಜಿಲ್ಲೆಯ ಸಚಿವರು, ಶಾಸಕರು ಹೋರಾಟಕ್ಕೆ ಬೆಂಬಲಿಸಬೇಕು. ನಮ್ಮ ಭಾಗದ ರಾಜಕಾರಣಿಗಳು ಹೋರಾಟದ ಜೊತೆಗೆ ನಿಂತು ಜನರ ಬೇಡಿಕೆ ಈಡೇರಿಸಬೇಕು. ಜೊತೆಗೆ ಎಲ್ಲ ಜನರು ಹೋರಾಟಕ್ಕೆ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಆರೋಗ್ಯ ಮತ್ತು ಶಿಕ್ಷಣವನ್ನು ಎಂದೂ ಖಾಸಗೀಕರಣ ಮಾಡಬಾರದು ಎಂದು ಒತ್ತಾಯಿಸಿದರು.

ವಿಜಯಪುರ ಜಿಲ್ಲೆಯ ಸಚಿವರು ಮತ್ತು ಶಾಸಕರು ಜನರ ಬೇಡಿಕೆಯನ್ನು ಸಿಎಂ ಅವರಿಗೆ ಮನವರಿಕೆ ಮಾಡಲು ವಿಫಲರಾಗಿದ್ದಾರೆ. ಇದು ನಮ್ಮ ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆ ಎದ್ದು ಕಾಣುತ್ತದೆ ಎಂದರು.

ಹಿರಿಯ ಪತ್ರಕರ್ತ ಸಾಮಾಜಿಕ ಹೋರಾಟಗಾರ ಸನತಕುಮಾರ ಬೆಳಗಲಿ ಅವರು ಮಾತನಾಡಿ, ಹೋರಾಟಗಾರರದು ಒಂದೇ ಬೇಡಿಕೆ ಜಿಲ್ಲೆಗೆ ಮೆಡಿಕಲ್ ಕಾಲೇಜು ಬೇಕು ಎನ್ನುವುದು. ಜನರ ಬೇಡಿಕೆಗೆ ನಕಾರಾತ್ಮಕವಾಗಿ ಸ್ಪಂದನೆ ಮಾಡದಿದ್ದರೆ ಮುಂದಿನ ದಿನಗಳಲ್ಲಿ ನೀವು ಶಾಸಕರು ಆಗಿ ಆಯ್ಕೆ ಆಗುವುದು ಕಷ್ಟವಾಗುತ್ತದೆ. ಮುಖ್ಯಮಂತ್ರಿಗಳು ಜನಪರವಾಗಿದ್ದಾರೆ. ಹೋರಾಟ ನಿರಂತರವಾಗಿ ನಡೆದರೆ ಜಯ ಸಿಕ್ಕೇ ಸಿಗುತ್ತದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು.

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶಂಕರ ಹಲಗತ್ತಿ ಅವರು ಮಾತನಾಡಿ, ನೂರು ದಿನ ಪೂರೈಸುವುದರೊಳಗೆ ಬೇಡಿಕೆ ಈಡೇರಿಸಬೇಕು. ಸಚಿವ ಎಂ.ಬಿ. ಪಾಟೀಲ ಜಿಲ್ಲೆಯ ಜನರ ನೋವು ಮತ್ತು ಬೇಡಿಕೆ ಸರಕಾರದ ಮಟ್ಟದಲ್ಲಿ ಪೂರೈಸಲು ಪ್ರಯತ್ನ ಮಾಡಬೇಕು ಎಂದು ಆಗ್ರಹಿಸಿದರು.

ಹಿರಿಯ ಚಿಂತಕ ಹಾಗೂ ವಾಲ್ಮಿ ಸಮಾಜದ ನಿರ್ದೇಶಕ ರಾಜೇಂದ್ರ ಪೊದ್ದಾರ ಅವರು ಮಾತನಾಡಿ, ಪಿಪಿಪಿ ಮಾಡೆಲ್ ನಮ್ಮ ನೆಲದ ವ್ಯವಸ್ಥೆ ಅಲ್ಲ. ಇಲ್ಲಿ ಲಾಭವೆ ಅವರಿಗೆ ಮುಖ್ಯ, ಶ್ರೀಮಂತರಿಗೆ ಲಾಭ ಮಾಡುವ ಅಂತಾರಾಷ್ಟ್ರೀಯ ಹುನ್ನಾರ ಇದರ ಹಿಂದೆ ಅಡಗಿದೆ ಎಂದು ಹೇಳಿದರು.

ಸರಕಾರ ಜನ ವಿರೋಧಿಯಾದರೆ ಜನರ ಮತ ಮತ್ತು ತೆರಿಗೆಗೆ ಏನು ಬೆಲೆಯಿದೆ ಎಂದು ಪ್ರಶ್ನೆ ಮಾಡಿದ ಅವರು, ರಾಜಕಾರಣಿಗಳು ಮತ್ತು ಅಧಿಕಾರಿಗಳು ಜನಪರವಾಗಿ ನಿಂತು ಮೆಡಿಕಲ್ ಕಾಲೇಜ್ ಸ್ಥಾಪನೆ ಮಾಡಬೇಕು ಎಂದು ಆಗ್ರಹಿಸಿದರು.

ಜನರಿಗೆ ನ್ಯಾಯ ಒದಗಿಸುತ್ತೇನೆ ಎಂದು ಹೇಳಿ ಆಯ್ಕೆ ಆದ ಜನಪ್ರತಿನಿದಿಗಳು ಜನರ ಆರೋಗ್ಯದ ಬೇಡಿಕೆಗೆ ಸ್ಪಂದಿಸಬೇಕು. ಸಮಾಜವಾದಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನರ ಬೇಡಿಕೆಗೆ ಸ್ಪಂದಿಸಲಿ ಎಂದರು.

ಹಿರಿಯ ರೈತ ಮುಖಂಡ ಅರವಿಂದ ಕುಲಕರ್ಣಿ ಅವರು ಮಾತನಾಡಿ, ಡಿ. 26ರಂದು ಸಚಿವ ಎಂ.ಬಿ. ಪಾಟೀಲ ಅವರ ಮನೆ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದರು.

ವೈದ್ಯಕೀಯ ಕಾಲೇಜು ಹೋರಾಟ ಸಮಿತಿ ಹಿರಿಯ ಹೋರಾಗಾರ ಬಿ. ಭಗವಾನ ರೆಡ್ಡಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಹೋರಾಟ ಸಮಿತಿಯ ಅನಿಲ ಹೊಸಮನಿ, ಲಲಿತಾ ಬಿಜ್ಜರಗಿ, ಬಾಬುರಾವ ಬೀರಕಬ್ಬಿ, ಸುರೇಶ ಜೀಬಿ, ವಿನೋದ ಖೇಡ, ಸುರೇಶ ಬಿಜಾಪುರ, ಭರತಕುಮಾರ ಎಚ್ ಟಿ, ವಿ.ಸಿ. ನಾಗಠಾಣ, ಜಂಬುನಾಥ ಕಂಚ್ಯಾಣಿ, ಶ್ರೀಶೈಲ ಸಜ್ಜನ, ಅಕ್ರಂ ಮಾಶಾಳಕರ, ಮಲ್ಲಿಕಾರ್ಜುನ ಬಟಗಿ, ಮಲ್ಲಿಕಾರ್ಜುನ ಹೆಚ್ ಟಿ, ವಿ.ಎ ಪಾಟೀಲ, ಜಗದೇವ ಸೂರ್ಯವಂಶಿ, ಸಿ.ಬಿ. ಪಾಟೀಲ, ಗಿರೀಶ ಕಲಘಟಗಿ, ಲಕ್ಷ್ಮಣ ಕಂಬಾಗಿ, ಗೀತಾ ಎಚ್., ಅಶೋಕ ವಾಲಿಕಾರ, ಸುಶೀಲಾ ಮಿಣಜಗಿ, ಚಂದ್ರಶೇಖರ ಬಗಲಿ, ಸುಭಾಸ ಹೊನ್ನಕಂಠಿ, ಸಲೀಂ ಹೊಕ್ರಾಣಿ, ಸುರೇಶ ಬಿರಾದಾರ, ಜಬೀನ ಅಥಣಿ, ಲಾಯಪ್ಪ ಇಂಗಳೆ, ಪ್ರಕಾಶ ಸಬರದ, ನೀಲಾಂಬಿಕಾ ಬಿರಾದಾರ,ಸುರೇಶ ಪಾಟೀಲ, ಜ್ಯೋತಿ ಮಿಣಜಗಿ,ದಸ್ತಗಿರ ಉಕ್ಕಲಿ,ಪ್ರಕಾಶ ಬಗಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸರಕಾರಿ ಕಾಲೇಜು 'ಪ್ರವೇಶಾತಿ ಅಭಿಯಾನಕ್ಕೆ' ಪಾಲಕರ ಸಹಕಾರ ಅಗತ್ಯ ; ಹನುಮಂತ ಕೋರಾಪುರ

ಧೈರ್ಯದ ದಾರಿ

**ಸಿರವಾರ,ಡಿ.20–** "ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಪ್ರಮಾಣ ಕಡಿಮೆ ಆಗುತ್ತಿದೆ ಎಂಬ ಆರೋಪಗಳ ನಡುವೆಯೇ ಈ ಬಾರಿ ಸರಕಾರಿ ಕಾಲೇಜುಗಳಲ್ಲಿ ದಾಖಲಾತಿಯ ಪ್ರಮಾಣ ಸರ್ಕಾರವು ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ "ಪ್ರವೇಶಾತಿ ಅಭಿಯಾನ ಎಂಬ ಈ ಕಾರ್ಯಕ್ರಮವನ್ನು ಕೈಗೆತ್ತಿಕೊಂಡಿದೆ. ಈ ಅಭಿಯಾನಕ್ಕೆ ಪಾಲಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಸಿರವಾರ ಸರಕಾರಿ ತು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಹನುಮಂತ ಕೋರಾಪುರ ಹೇಳಿದರು.

ಅವರು ಗುರುವಾರ ರಂದು ಸಿರವಾರ ಪಟ್ಟಣದ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ನಡೆದ "ಪ್ರವೇಶಾತಿ ಅಭಿಯಾನ"2026 27 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು 'ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಧ್ಯಾರ್ಥಿಗಳ ಪ್ರವೇಶ ಸಂಖ್ಯೆ ಕಡಿಮೆಯಾಗುತ್ತಿದೆ.
ಅದ್ದರಿಂದ ಸರ್ಕಾರವು ವಿಧ್ಯಾರ್ಥಿಗಳನ್ನು ಆಕರ್ಷಿಸುವ ನಿಟ್ಟಿನಲ್ಲಿ ನೂತನ "ಪ್ರವೇಶಾತಿ ಅಭಿಯಾನ" ಕಾರ್ಯಕ್ರಮಹಮ್ಮಿಕೊಂಡಿದ್ದು ಈ ಕಾರ್ಯಕ್ರಮದಲ್ಲಿ ಪಾಲಕರ ಪಾತ್ರ ಅತಿಮುಖ್ಯ ಪಾತ್ರವನ್ನು ವಹಿಸುತ್ತದೆ.ಸರಕಾರಿ ಕಾಲೇಜಿನಲ್ಲಿ ಉನ್ನತ ಗುಣಮಟ್ಟದ ಶಿಕ್ಷಣ ತೊರೆಯುತ್ತದೆ. ವಿಧ್ಯಾರ್ಥಿಗಳ ಉತ್ತಮ ಗುಣಮಟ್ಟದ




ಫಲಿತಾಂಶವೇ ನಮ್ಮ ಗುರಿಯಾಗಿದೆ. ನಮ್ಮ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಮತ್ತು ಬಿ.ಸಿ.ಎ ತರಗತಿಗಳಿಗೆ ಉನ್ನತ ಗುಣಮಟ್ಟದ ಉಪನ್ಯಾಸಕರನ್ನು ಹೊಂದಿದ್ದು, ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಲಭ್ಯವಿರುವ ವಿವಿಧ ಕೋರ್ಸ್‌ಗಳ ಲಭ್ಯವಿದೆ. ನಮ್ಮ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರವೇಶಾತಿಯನ್ನು ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಹನುಮಂತ ಚನ್ನೂರ್, ಪದವಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಸುಭಾನ್ ಸಾಬ್.ಎಸ್, ಮುತ್ತಪ್ಪ, ರಾಜಶೇಖರ ಎಂ ದೈಹಿಕ ಶಿಕ್ಷಣ ನಿರ್ದೇಶಕರು, ಉಪನ್ಯಾಸಕರಾದ ಫರೀದ್ ಹಾಗೂ ಜಯಪ್ಪ ಪದವಿ ಕಾಲೇಜಿನ ಎಸ್.ಡಿ.ಎ ಬಸವರಾಜ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಎಡಿಸಿ ಸೂಚನೆ

# ಪ್ರತಿ ಮಗುವಿಗೂ ಪಲ್ಸ್ ಪೋಲಿಯೊ ಲಸಿಕೆ ಸಿಗಬೇಕು

ಕಾರ್ಯ ಕ್ರಮದ ಕುರಿತು ಆಟೋ, ಸ್ಥಳೀಯ ಸಂಸ್ಥೆಯ ಕಸದ ಸಂಗ್ರಹಣೆ ವಾಹನಗಳಲ್ಲಿ ಧ್ವನಿವರ್ಧಕಗಳ ಮೂಲಕ, ಬ್ಯಾನರ್ ಹಾಗೂ ಕರಪತ್ರಗಳನ್ನು ಅಂಟಿಸುವ ಮೂ ಲಕ ನಾಗರಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಬೂತ್‌ಗಳ ಜೊತೆಗೆ 33 ಮೊಬೈಲ್ ತಂಡ ಹಾಗೂ 53 ಟ್ರಾನ್ಸಿಟ್ ತಂಡಗಳು ಕಾರ್ಯನಿರ್ವಹಿಸಲಿದ್ದು, 2436 ಸ್ವಯಂ ಸೇವಕರು ಪಲ್ಸ್ ಪೋಲಿಯೊ ಲಸಿಕೆ ಹಾಕುವ ಕಾರ್ಯದಲ್ಲಿ ಪಾಲ್ಗೊಳ್ಳಲಿದ್ದಾರೆ. ಅದನ್ನು ಮೇಲ್ವಿಚಾರಣೆ ಮಾಡಲು 248 ಮೇಲ್ವಿಚಾರಕರು ಕೆಲಸ ಮಾಡಲಿದ್ದಾರೆ. 2 ರೈಲ್ವೇ ಸ್ಟೇಷನ್ ಸೇರಿದಂತೆ ಜಿಲ್ಲೆಯ ಎಲ್ಲ ಆಸ್ಪತ್ರೆಗಳು, ಕೆಲ ಶಾಲೆಗಳು, ಸಾರ್ವಜನಿಕ ಸ್ಥಳಗಳಲ್ಲಿ ಲಸಿಕೆ ನೀಡಲು ಪ್ರದೇಶವನ್ನು ಗುರುತಿಸಲಾಗಿದೆ. ಈ ಸಂಬಂಧ ಎಲ್ಲಾ ಕಡೆ ಸಕ್ರಿಯವಾಗಿ ಲಸಿಕೆ ಹಾಕುವ ಸಿಬ್ಬಂದಿಗಳನ್ನು ನಿಯೋಜಿಸಿ ಲಸಿಕೆ ಹಾಕುವ ಕಾರ್ಯವನ್ನು ಸಮರ್ಪಕವಾಗಿ ಮಾಡಲಾಗುವುದೆಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯ ಶಂಕರ್, ಪಾಲಿಕೆ ಆರೋಗ್ಯಾಧಿಕಾರಿ ಡಾ.ಮಹಮ್ಮದ್ ಶಾಕೀರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಕಾಂಬಳೆ, ಡೆಂಗೆ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ ಸ್ವಾಮಿ, ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ್, ಜೆಸ್ಕಾಂನ ಎಇಇ ಶಿವನಗುತ್ತಿ, ಸಾರಿಗೆ ಇಲಾಖೆಯ ಆರ್ಜುನ್, ರಾಯಚೂರು ಸಿಡಿಪಿಓ ಮನಸೂರ್ ಅಹ್ಮದ್ ಸೇರಿದಂತೆ ಇತರರು ಇದ್ದರು.

## ಡಿಸೆಂಬರ್ 21ರವರೆಗೆ ಬೆಳಗಿನ ಜಾವ ತೀವ್ರ ಶೀತ ಗಾಳಿ ಬೀಸುವ ಸಾಧ್ಯತೆ, ಸಾರ್ವಜನಿಕರಿಗೆ ಮುಂಜಾಗ್ರತಾ ಸಲಹೆಗಳು

ಸಂಪರ್ಕಿಸಬೇಕು. ಶೀತ ಅಲೆಯು ನಿಮ್ಮ ಪ್ರದೇಶದಲ್ಲಿ ಇದೆಯೇ ಎಂದು ತಿಳಿಯಲು ರೇಡಿಯೊವನ್ನು ಆಲಿಸಿ, ಟಿವಿ ವೀಕ್ಷಿಸಿ. ಸ್ಥಳೀಯ ಹವಾಮಾನ ಮುನ್ಸೂಚನೆಗಾಗಿ ಪತ್ರಿಕೆಗಳನ್ನು ಓದಬೇಕು. ತುರ್ತು ಸಾಮಗ್ರಿಗಳನ್ನು ಸಿದ್ಧವಾಗಿಡಬೇಕು.
ದೇಹದ ಉಷ್ಣತೆಯ ಸಮತೋಲನವನ್ನು ಕಾಪಾಡಿಕೊಳ್ಳಲು ಆರೋಗ್ಯಕರ ಆಹಾರವನ್ನು ಸೇವಿಸಿ ಬಿಸಿ ದ್ರವಗಳನ್ನು ನಿಯಮಿತವಾಗಿ ಕುಡಿಯಿರಿ, ಏಕೆಂದರೆ ಇದು ಶೀತದ ವಿರುದ್ಧ ಹೋರಾಡಲು ದೇಹದ ಉಷ್ಣತೆಯನ್ನು ಕಾಪಾಡಿಕೊಳ್ಳುತ್ತದೆ.
ಏನು ಮಾಡಬಾರದು: ಶೀತಕ್ಕೆ ದೀರ್ಘಕಾಲದವರೆಗೆ ಒಡ್ಡಿಕೊಳ್ಳುವುದನ್ನು ತಪ್ಪಿಸಬೇಕು. ಮದ್ಯಪಾನ ಮಾಡಬೇಡಿ. ಇದು ನಿಮ್ಮ ದೇಹದ ಉಷ್ಣತೆಯನ್ನು ಕಡಿಮೆ ಮಾಡುತ್ತದೆ. ಇದು ವಾಸ್ತವವಾಗಿ ನಿಮ್ಮ ರಕ್ತನಾಳಗಳನ್ನು ಕಿರಿದಾಗಿಸುತ್ತದೆ. ವಿಶೇಷವಾಗಿ ಕೈಯಲ್ಲಿ ಇದು ಲಘೋಷ್ಣತೆಯ ಅಪಾಯವನ್ನು ಹೆಚ್ಚಿಸುತ್ತದೆ.
ನಡುಗುವುದನ್ನು ನಿರ್ಲಕ್ಷಿಸಬೇಡಿ ಏಕೆಂದರೆ ದೇಹವು ಶಾಖವನ್ನು ಕಳೆದುಕೊಳ್ಳುವ ಮೊದಲ ಸಂಕೇತವಾಗಿರುತ್ತದೆ. ಆದ್ದರಿಂದ ಮನೆಯೊಳಗೆ ವಿಶ್ರಾಂತಿ ಪಡೆಯಿರಿ. ಸಂಪೂರ್ಣವಾಗಿ ಎಚ್ಚರಗೊಳ್ಳದ ಹೊರತು ಪೀಡಿತ ವ್ಯಕ್ತಿಗೆ ಯಾವುದೇ ದ್ರವವನ್ನು ನೀಡಬಾರದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ರಾಯಚೂರು ಉತ್ಸವ ತಯಾರಿ ಪೂರ್ವಭಾವಿ ಸಭೆ 22ಕ್ಕೆ

**ರಾಯಚೂರು ಡಿ,20–**2026ರ ಜನವರಿ ಮಾಹೆಯಲ್ಲಿ ರಾಯಚೂರು ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಉತ್ಸವದ ಸಿದ್ಧತೆಗಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 22ರ ಬೆಳಿಗ್ಗೆ 10.30ಕ್ಕೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದ್ದು, ಈ ಸಭೆಗೆ ಜಿಲ್ಲೆಯ ಎಲ್ಲಾ ಅಧಿಕಾರಿ, ಸಿಬ್ಬಂದಿ ಖುದ್ದಾಗಿ ಹಾಜರಾಗುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ತಾಲೂಕಿನಲ್ಲಿ ಡಿ.24ರಂದು ಇ–ಪೌತಿ ಅಂದೋಲನ

**ರಾಯಚೂರು ಡಿ,20–** ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಇ–ಪೌತಿ ಅಂದೋಲನವನ್ನು ರಾಯಚೂರು ತಾಲೂಕಿನ ವ್ಯಾಪ್ತಿಯಲ್ಲಿ ಡಿಸೆಂಬರ್ 24ರಂದು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಸೂಕ್ತ ದಾಖಲೆಗಳೊಂದಿಗೆ ಅಂದೋಲನದಲ್ಲಿ ಸಕ್ರಿಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ಅವರು ಕೋರಿದ್ದಾರೆ.
ಅಂದು ಬೆಳಿಗ್ಗೆಯಿಂದ ರಾಯಚೂರಿನ ತಹಶೀಲ್ದಾರ್ ಕಚೇರಿ, ದೇವಸೂಗೂರು, ಕಲಮಲಾ, ಚಂದ್ರಬಂಡಾ, ಯರಗೇರಾ ಹಾಗೂ ಗಿಲ್ಲೇಸುಗೂರು ನಾಡ ಕಾರ್ಯಲಯದಲ್ಲಿ ಇ–ಪೌತಿ ಅಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಸೆಂಬರ್ 24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**ರಾಯಚೂರು ಡಿ,20–**ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ನಗರದ ಸರ್ಕಾರಿ ನೌಕರರ ಭವನದಲ್ಲಿ
ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷ ಎಸ್.ಆರ್.ಮೆಹರೋಜ್ ಖಾನ್ ರಾಯಚೂರು ಜಿಲ್ಲಾ ಪ್ರವಾಸ

ಧೈರ್ಯದ ದಾರಿ

**ರಾಯಚೂರು ಡಿ,20–** ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್ ಅವರು ಡಿಸೆಂಬರ್ 21ರಿಂದ ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.
ಡಿಸೆಂಬರ್ 21ರ ಬೆಳಿಗ್ಗೆ 11 ಗಂಟೆಗೆ ರಸ್ತೆಯ ಮೂಲಕ ಬೆಂಗಳೂರಿನಿಂದ ನಿರ್ಗಮಿಸಿ ಸಂಜೆ 6ಗಂಟೆಗೆ ರಾಯಚೂರಿಗೆ ಆಗಮಿಸುವರು. ಡಿಸೆಂಬರ್ 22ರ ಮಧ್ಯಾಹ್ನ 2 ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಆವರಣದ ಕೃಷಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ಯುವನಿಧಿ ಯೋಜನೆ ಸೇರಿದಂತೆ ಗ್ಯಾರಂಟಿ ಯೋಜನೆಗಳು ವಿದ್ಯಾರ್ಥಿಗಳು ಹಾಗೂ ಸಮಾಜದಲ್ಲಿ ಬೀರಿರುವ ಸಕಾರಾತ್ಮಕ ಪರಿಣಾಮಗಳ ಕುರಿತು ಮುಕ್ತ ಸಂವಾದ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.
ಸಂಜೆ 4 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಪ್ರಸ್ತುತದವರೆಗೆ ಸಾಧಿಸಿರುವ ಪ್ರಗತಿಯ ಕುರಿತು ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲೂಕು ಗ್ಯಾರಂಟಿ ಸಮಿತಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗಿಯಾಗುವವರು.
ಸಂಜೆ 6 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡಿ ಪಕ್ಷದ ಮುಖಂಡರೊಂದಿಗೆ ಸಭೆ ನಡೆಸಿ, ಬೀದರ್ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿಗಳಾದ ಚಂದ್ರಶೇಖರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಸ ವಿಲೇವಾರಿಗೆ ಗ್ರಾ.ಪಂ. ನಿರ್ಲಕ್ಷ್ಯ: ಸುರೇಶ್‌ಗೌಡ ಗರಂ; ಪಂಚಾಯ್ತಿ ಅಧಿಕಾರಿಗಳ ವಿರುದ್ಧ ಕ್ರಮಕ್ಕಾಗಿ ಸಚಿವರಿಗೆ ಒತ್ತಾಯ

**ತುಮಕೂರು, ಡಿ. 20–** ತುಮಕೂರು ಗ್ರಾಮಾಂತರ ಕ್ಷೇತ್ರದ ವಿವಿಧ ಗ್ರಾಮ ಪಂಚಾಯ್ತಿಗಳಲ್ಲಿ ಸಮರ್ಪಕವಾಗಿ ಕಸ ವಿಲೇವಾರಿ ಆಗುತ್ತಿಲ್ಲ, ಕಸ ನಿರ್ವಹಣೆಗೆಂದು 15ನೇ ಹಣಕಾಸು ಯೋಜನೆಯ ಶೇ. 30 ರಷ್ಟು ಮೀಸಲಾದ ಹಣವನ್ನು ಪಿಡಿಓಗಳು ದುರುಪಯೋಗಪಡಿಸಿಕೊಂಡಿದ್ದಾರೆ. ಅವರ ವಿರುದ್ಧ ಕ್ರಮ ತೆಗೆದುಕೊಂಡು ಸರಿಯಾದ ರೀತಿಯಲ್ಲಿ ಕಸ ವಿಲೇವಾರಿ ಮಾಡಲು ಸೂಚಿಸಬೇಕು ಎಂದು ಶಾಸಕ ಬಿ.ಸುರೇಶ್‌ಗೌಡ ಬೆಳಗಾವಿಯಲ್ಲಿ ನಡೆಯುತ್ತಿರುವ ವಿಧಾನಸಭಾ ಅಧಿವೇಶನದಲ್ಲಿ ಸಚಿವರ ಗಮನ ಸೆಳೆದರು.

ತಮ್ಮ ಕ್ಷೇತ್ರದ ಹೆಬ್ಬೂರು, ನಾಗವಲ್ಲಿ, ಊರುಕೆರೆ, ಸ್ವಾಂದೇನಹಳ್ಳಿ, ಯಲ್ಲಾಪುರ, ಹೆಗ್ಗೆರೆ ಪಂಚಾಯ್ತಿಗಳಲ್ಲಿ ಕಸ ವಿಲೇವಾರಿ ಆಗುತ್ತಿಲ್ಲ, ರಸ್ತೆಯುದ್ದಕ್ಕೂ ಕಸ ಹರಡಿದೆ. ಜಿಲ್ಲಾ ಕೇಂದ್ರ ತುಮಕೂರು ನಗರ ಸಮೀಪವೇ ಇರುವ ಈ ಗ್ರಾಮಗಳ ನೈರ್ಮಲ್ಯ ಶೇ.



ಕಾಪಾಡುವಲ್ಲಿ ಪಿಡಿಒಗಳು ನಿರ್ಲಕ್ಷ್ಯತೆ ವಹಿಸಿದ್ದಾರೆ. 15ನೇ ಹಣಕಾಸು ಯೋಜನೆಯಡಿ ಕಸ ನಿರ್ವಹಣೆಗೆ ಮೀಸಲಾದ 30ರಷ್ಟು ಹಣವನ್ನು ದುರುಪಯೋಗ ಮಾಡಿಕೊಳ್ಳಲಾಗಿದೆ. ಇದರಿಂದ ಗ್ರಾಮಗಳ ತ್ಯಾಜ್ಯ ವಿಲೇವಾರಿ ಆಗುತ್ತಿಲ್ಲ. ಈ ಪಂಚಾಯಿತಿ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವರಿಗೆ ಹೇಳಿದರು. ಈ ಸಮಸ್ಯೆಗೆ ಸರ್ಕಾರದಿಂದ ಬೇಕಾಬಿಟ್ಟಿ ಉತ್ತರ ಬಂದಿದೆ. ಈ ಸಂಬಂಧ ತಾವು ಸಾಕಷ್ಟು ಸಭೆಗಳನ್ನು ಮಾಡಿ ಕಸ ವಿಲೇವಾರಿ ಮಾಡಲು, ವಿಲೇವಾರಿ ಘಟಕಗಳನ್ನು ಸ್ಥಾಪಿಸಲು ಜಾಗ ಗುರು ತಿಸಲು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗೆ ತಿಳಿಸಿದರೂ ಆ ಕೆಲಸ ಆಗಿಲ್ಲ ಎಂದ ಶಾಸಕ ಸುರೇಶ್‌ಗೌಡ, ಸಚಿವರು ಕೇವಲ ಅಧಿಕಾರಿಗಳು ಕೊಡುವ ವರದಿ ಓದಿದರೆ ಸಾಕಾಗುವುದಿಲ್ಲ, ಸೂಕ್ತ ಕ್ರಮ ಆಗಬೇಕು ಹಾಗೂ ಗ್ರಾಮಗಳಲ್ಲಿ ಸಮರ್ಪಕವಾಗಿ ಕಸ ವಿಲೇವಾರಿ ಆಗಬೇಕು ಎಂದು ಒತ್ತಾಯಿಸಿದರು.

## ಫೆ. 1 ರಂದು ಎಸ್‌ಜಿಸಿ ಸಿಇಟಿ –2026

**ಕಲಬುರಗಿ,ಡಿ. 20:** ನಗರದ ಶ್ರೀ ಗುರು ಸ್ವತಂತ್ರ ಪದವಿಪೂರ್ವ ವಿಜ್ಞಾನ ಕಾಲೇಜುವತಿಯಿಂದ ಪಿಯುಸಿ ವಿಜ್ಞಾನ ವಿಭಾಗಕ್ಕೆ ಸೇರಬಯಸುವ ಎಸ್‌ಎಸ್‌ಎಲ್‌ಸಿ ಮತ್ತು ಸಿಬಿಎಸ್‌ಸಿ , ಹಾಗೂ ಐಸಿಎಸ್‌ಸಿ ಬೋರ್ಡ್ ವಿದ್ಯಾರ್ಥಿಗಳಿಗಾಗಿ 2026 ರ ಫೆ.1 ರಂದು ಎಸ್‌ಜಿಸಿ ಸಿಇಟಿ –2026 ಆಯೋಜಿಸಿದೆ.

ಎಸ್‌ಜಿಸಿ ಸಿಇಟಿ ಪ್ರಕಾರ ಟಾಪರ್ಸ್‌ಗಳಿಗೆ ಶೇ.100 ವರೆಗೆ ಶುಲ್ಕ ರಿಯಾಯಿತಿ ಇದೆ.ಸಿಬಿಎಸ್‌ಸಿ , ಹಾಗೂ ಐಸಿಎಸ್‌ಸಿ ಬೋರ್ಡ್ ವಿದ್ಯಾರ್ಥಿಗಳಿಗಾಗಿ 2026 ರ ಫೆ.1 ರಂದು ಬೆಳಿಗ್ಗೆ 10.30 ರಿಂದ 12.30 ವರೆಗೆ ಎಸ್‌ಜಿಸಿ ಸಿಇಟಿ –2026 ನಡೆಯಲಿದೆ.ರಾಜ್ಯ ಪಠ್ಯಕ್ರಮದ ವಿದ್ಯಾರ್ಥಿಗಳಿಗಾಗಿ ಅದೇ ದಿನ ಮಧ್ಯಾಹ್ನ 2 ರಿಂದ 4 ರವರೆಗೆ ಪರೀಕ್ಷೆ ನಡೆಯಲಿದೆ.

ವಿದ್ಯಾರ್ಥಿಗಳು 30–01–2026 ರವರೆಗೆ ಆನ್‌ಲೈನ್ ಅಥವಾ ಆನ್‌ಲೈನ್ ಮೂಲಕ ನೋಂದಣಿ ಮಾಡಬಹುದಾಗಿದೆ. 100 ಪ್ರಶ್ನೆಗಳ 400 ಅಂಕಗಳ 2 ತಾಸಿನ ಪರೀಕ್ಷೆ ಇದಾಗಿದ್ದು, ಸರಿ ಉತ್ತರಕ್ಕೆ 4 ಅಂಕ, ತಪ್ಪು ಉತ್ತರಕ್ಕೆ –1 ಅಂಕ ಇರಲಿದೆ.

ಹೆಚ್ಚಿನ ಮಾಹಿತಿಗೆ 7618702418 ಅಥವಾ 9035090261 ಸಂಖ್ಯೆಯನ್ನು ಸಂಪರ್ಕಿಸಲು ಕೋರಲಾಗಿದೆ.

# ಭೂತಾಯಿಗೆ ಮಹಾ ಪೂಜೆಗೈದ ರೈತಾಪಿ ವರ್ಗ



**ತಾಳಿಕೋಟೆ:ಡಿ.20:** ಶುಕ್ರವಾರರಂದು ತಾಳಿಕೋಟೆ ಪಟ್ಟಣ ಅಲ್ಲದೇ ಸುತ್ತಮುತ್ತಲಿನ ಗ್ರಾಮಗಳಲ್ಲಿಯ ರೈತಾಪಿ ಜನರು ಎಳ್ಳ ಅಮವಾಸ್ಯೆಯ ನಿಮಿತ್ಯವಾಗಿ ತಮ್ಮ ತಮ್ಮ ಜಮೀನುಗಳಿಗೆ ತೆರಳಿ ಭೂತಾಯಿಗೆ ಈ ಹಿಂದಿನಿಂದ ಬಂದ ಸಂಪ್ರದಾಯದಂತೆ ಬನ್ನಿ ಗಿಡಕ್ಕೆ ಹಾಗೂ ಭೂತಾಯಿಗೆ ಅನ್ನ ಸಂತರ್ಪಣೆ ಮಾಡುವದರೊಂದಿಗೆ ಕಾಯಿ ಕರ್ಪೂರ ಎಡೆ ಲೋಬಾನ ಊದಬತ್ತಿಗಳಿಂದ ಮಹಾ ಪೂಜೆ ಸಲ್ಲಿಸಿದರು.

ತಮ್ಮ ಜಮೀನುಗಳಲ್ಲಿ ಬಿತ್ತಲಾಗಿ ಚಿಗರುತ್ತಿರುವ ಹಾಗೂ ಚಿಗುರಿದ ಬೆಳೆಗಳಾದ ಜೋಳ, ಕಡ್ಲಿ, ಗೋದಿ, ಹತ್ತಿ, ಅಜವಾನ, ತೋಗರಿ ನೇವಣಿ, ಹೆಸರು, ಅಲಸಂದಿ, ಹುರಳಿ, ಶೇಂಗಾ, ಬೆಳೆಗಳಿಗೆ ಹುಲುಸಾಗಿ ಬರಲಿ ಎಂಬ ಉದ್ದೇಶದಿಂದ ಈ ಹಿಂದಿನಿಂದ ಸಾಗಿಬಂದ ವಾಡಿಕೆಯಂತೆ ಮಹಾಪೂಜೆ ಗೈದು ಭೂತಾಯಿಗೆ ನಮಿಸಿ ಬೇಡಿಕೊಂಡು ಹುಲುಸಾಗಿ ಬೆಳೆ ಬರಲಿ ಎಂದು ಆಸಿಸಿರುವದು ಕಂಡು ಬಂತು.

ಎಳ್ಳಾ ಅಮವಾಸ್ಯೆಯ ನಿಮಿತ್ಯವಾಗಿ ಮನೆಯಲ್ಲಿ ತಯಾರಿಸಿದ ಪಕ್ವಾನ ಭೋಜನವಾದ ಕರಿಗಡಬು, ಸಜ್ಜೆ ರೋಟ್ಟಿ, ಪುಂಡಿಪಲ್ಲೆ, ಬದನೆಕಾಯಿ ಪಲ್ಲೆ, ಉಸುಳಿ ಮಸರು, ಚಟ್ನಿ, ಚಪಾತಿ, ಎಳ್ಳೆ ಹೋಳಿಗೆ, ಶೇಂಗಾ ಹೋಳಿಗೆ ಶೆಂಡಿಗೆ ಹಪ್ಪಳ, ಸಜ್ಜೆ ಕಡಬು, ಬಾನುಮಸರು, ಬೆಣ್ಣೆ, ತುಪ್ಪ, ಉತ್ತರ ಕರ್ನಾಟಕದ ಹೆಸರು ಪಡೆದಂತಹ ರೈತಾಪಿ ಜನರ ಪಕ್ವಾನ ಭೋಜನ ಸವಿದು ಯಾವುದೇ ಬೇದ ಭಾವವಿಲ್ಲದೇ ಸಹಬಾಗಿಗಳಾಗಿ ಜನತೆ ಭೋಜನಕೂಟದಲ್ಲಿ ಪಾಲ್ಗೊಂಡು ತೃಪ್ತಿಪಟ್ಟಿದ್ದೇನು ಕಡಿಮೇನಿಲ್ಲಾ.

ಕೆಲವು ರೈತಾಪಿಜನರು ತಮ್ಮ ತಮ್ಮ ಟ್ಯಾಕ್ಟರ್‌ಗಳ ಮೂಲಕ ಹಾಗೂ ಎತ್ತಿನ ಬಂಡಿಯ ಮೂಲಕ ಕಾರು, ದ್ವಿಚಕ್ರ ವಾಹನಗಳಿಂದ ತಮ್ಮ ತಮ್ಮ ಸಂಬಂಕರಿಗೆ ಹಾಗೂ ಹಿತೈಷಿಗಳಿಗೆ, ಗೆಳೆಯರಿಗೆ ಜಮೀನುಗಳಿಗೆ ಕರೆದುಕೊಂಡು ಹೋಗಿ ಪಕ್ವಾನ ಊಟ ಬಡಿಸಿ ಸಾಯಂಕಾಲ ಗೋದೋಳಿ ಮಹಾ ಮೋಹರ್ತದಲ್ಲಿ ಮರಳಿ ತಮ್ಮ ತಮ್ಮ ಮನೆಗಳಿಗೆ ಆಗಮಿಸಿದ್ದು ಕಂಡುಬಂದಿತು.

ಎಳ್ಳಾ ಅಮವಾಸ್ಯೆ ನಿಮಿತ್ಯವಾಗಿ ತಾಳಿಕೋಟೆ ಪಟ್ಟಣದಲ್ಲಿಯ ವ್ಯಾಪಾರಸ್ಥರು ತಮ್ಮ ತಮ್ಮ ಜಮೀನುಗಳಿಗೆ ಅಂಗಡಿ ಮುಗ್ಗಟ್ಟುಗಳನ್ನು ಮುಚ್ಚಿಕೊಂಡು ಹೋಗಿದ್ದರಿಂದ ಪಟ್ಟಣದ ಮುಖ್ಯರಸ್ತೆಗಳೆಲ್ಲವೂ ಸಾಯಂಕಾಲದ ವರೆಗೆ ಬಿಕೋ ಎನ್ನುತ್ತಿದ್ದವು.

ರೈತರ ಹಬ್ಬಗಳಲ್ಲಿ ಎಳ್ಳಾ ಅಮವಾಸ್ಯೆಯು ಪ್ರಮುಖ ಹಬ್ಬವಾಗಿ ಪರಿಣಮಿಸಿದೆ. ದೀಪಾವಳಿ ಹಬ್ಬ ವ್ಯಾಪಾರಸ್ಥರಿಗೆ ದೊಡ್ಡ ಹಬ್ಬವಾಗಿ ಪರಿಣಮಿಸಿದಂತೆ ರೈತಾಪಿ ಜನತೆಗೆ ಎಳ್ಳಾ ಅಮವಾಸ್ಯೆ ದೊಡ್ಡಹಬ್ಬವಾಗಿ ಪರಿಣಮಿಸಿದೆ.

# ಸೈದಾಪುರ: ರೈತಾಪಿ ವರ್ಗದಿಂದ ಎಳ್ಳು ಅಮವಾಸೆ ಸಂಭ್ರಮದಿಂದ ಆಚರಣೆ



**ಸೈದಾಪುರ:ಡಿ.20:**ವರ್ಷ ಪೂರ್ತಿ ಜನ ಜಾನುವಾರುಗಳ ಹಸಿವನ್ನು ನೀಗಿಸುವ ಭೂಮಿ ತಾಯಿಗೆ ಎಳ್ಳ ಅಮಾವಾಸ್ಯೆ ಅಂಗವಾಗಿ ಶುಕ್ರವಾರ ಮತ್ತು ಬಂಧು–ಬಾಂಧವರು ಕುಟುಂಬ ಹಾಗೂ ಮಿತ್ರರೊಡನೆ ತೆರಳಿ ಶ್ರದ್ಧಾ ಭಕ್ತಿ ಪೂರ್ವಕವಾಗಿ ಪೂಜೆ ಸಲ್ಲಿಸಿ, ಭೂತಾಯಿಗೆ ಉಡಿ ತುಂಬಿ ಚರಗ ಚೆಲ್ಲುವ ಮೂಲಕ ರೈತಾಪಿ ವರ್ಗದಿಂದ ಸಂಭ್ರಮ ಸಡಗರದಿಂದ ಆಚರಿಸಲಾಯಿತು.

ಸಮೀಪದ ಗ್ರಾಮಗಳಲ್ಲಿ ಎಳ್ಳು ಅಮವಾಸೆ ಪ್ರಯುಕ್ತ ರೈತರು ತಹರೇವಾರಿ ಭಕ್ಷ್ಯ ಭೋಜನಗಳನ್ನು ತುಂಬಿಕೊಂಡು ಎತ್ತಿನ ಗಾಡಿ ಹಾಗೂ ಟ್ರ್ಯಾಕ್ಟರ್ ಮತ್ತು ಜಿಪ್, ಬೈಕ್ ವಾಹನಗಳಲ್ಲಿ ಜೋಳದ ಹೊಲದ ಕಡೆಗೆ ಹೋಗುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು. ಹೊಲದಲ್ಲಿನ ಬನ್ನಿ ಗಿಡಕ್ಕೆ ಹೊಸ ಸೀರೆಯನ್ನು ಉಡಿಸಿ, ಹೂ ಮುಡಿಸಿ, ಭಕ್ತಿಯಿಂದ ಭೂತಾಯಿಗೆ ಉಡಿ ತುಂಬಿ ಹಾಗೂ ಹೊಲದ ನಾಲ್ಕು ಮೂಲೆಗಳಲ್ಲಿ ಮೊದಲು ನೀರು ಚಿಮುಕಿಸಿ, ಮರದ ಕೆಳಗಡೆ ಐದು ಕಲ್ಲುಗಳನ್ನು ಜೋಡಿಸಿ ಬನ್ನಿ ಮರ ಹಾಗೂ ಕಲ್ಲುಗಳಿಗೆ ವಿಭೂತಿ, ಕುಂಕುಮ ಹಚ್ಚಿ ವಿಶೇಷ ಪೂಜೆ ಸಲ್ಲಿಸಿದರು. ಗ್ರಾಮೀಣ ಭಾಗದಲ್ಲಿ ವಿಶಿಷ್ಟ ಸಂಪ್ರದಾಯದೊಂದಿಗೆ ಆಚರಿಸುವ ಎಳ್ಳು ಅಮಾವಾಸ್ಯೆ ಹಬ್ಬವು ಜಾತಿ, ಮತ, ಧರ್ಮ, ಪಂಥವನ್ನು ಮೀರಿ ಎಲ್ಲರೊಂದಿಗೆ ಸ್ನೇಹ ಬಾಂಧವ್ಯದೊಂದಿಗೆ ಒಡಗೂಡಿ ಬಾಳುವ ಮನಸ್ಸಿನಿಂದ ಎಲ್ಲ ವರ್ಗದ ಜನರು ತಮ್ಮ, ತಮ್ಮ ಹೊಲಗಳಿಗೆ ತೆರಳಿ ಚೆರಗ ಚೆಲ್ಲಿ ವಿವಿಧ ತರಹದ ಮೃಷ್ಟಾನ್ನ ಭೋಜನ ಸವಿದರು. ಸಂಜೆಯಾಗುತ್ತಿದ್ದಂತೆ ಮತ್ತೆ ಎಲ್ಲರೂ ಒಗ್ಗೂಡಿ ಐದು ಜೋಳದ ದಂಟು ಕಿತ್ತಾಡಿಕೊಂಡು ಬುಟ್ಟಿಯಲ್ಲಿಟ್ಟುಕೊಂಡು ಮನೆಗೆ ತೆರಳಿದರು.

# ಖ್ಯಾತ ಮಲಯಾಳಂ ನಟ, ನಿರ್ದೇಶಕ ಶ್ರೀನಿವಾಸನ್ ನಿಧನ

**ಕೊಚ್ಚಿ, ಡಿ.20–** ಖ್ಯಾತ ಮಲಯಾಳಂ ನಟ ಕಮ್ ನಿರ್ದೇಶಕ ಶ್ರೀನಿವಾಸನ್ ಇಂದು ಬೆಳಿಗ್ಗೆ ಇಲ್ಲಿಗೆ ಸಮೀಪದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ ಎಂದು ಚಲನಚಿತ್ರೋದ್ಯಮ ಮೂಲಗಳು ತಿಳಿಸಿವೆ.

ಅವರಿಗೆ 69 ವರ್ಷ ವಯಸ್ಸಾಗಿತ್ತು.ತಡರಾತ್ರಿ ಅವರನ್ನು ತ್ರಿಪುನಿತುರದಲ್ಲಿರುವ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇಂದು ಬೆಳಿಗ್ಗೆ ಅವರು ನಿಧನರಾದರು.ಕಣ್ಣೂರು ಮೂಲದ ಶ್ರೀನಿವಾಸನ್ ಕಳೆದ ಹಲವು ವರ್ಷಗಳಿಂದ ಕೊಚ್ಚಿಯಲ್ಲಿ ವಾಸಿಸುತ್ತಿದ್ದರು.ನಟನೆಯ ಜೊತೆಗೆ, ಅವರು ನಿರ್ದೇಶಕ, ಚಿತ್ರಕಥೆಗಾರ, ಡಬ್ಬಿಂಗ್ ಕಲಾವಿದ ಮತ್ತು ನಿರ್ಮಾಪಕರೂ ಆಗಿದ್ದರು.ಅವರು 200 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ, 1976 ರಲ್ಲಿ ಮಣಿಮುಳಕ್ಕಂ ಚಿತ್ರದ ಮೂಲಕ ಪಾದಾರ್ಪಣೆ ಮಾಡಿದರು.ಅವರ ಇಬ್ಬರು ಪುತ್ರರಾದ ವಿನೀತ್ ಶ್ರೀನಿವಾಸನ್ ಮತ್ತು ಧ್ಯಾನ್ ಶ್ರೀನಿವಾಸನ್ ಸಹ ನಟರಾಗಿ ಗುರುತಿಸಿಕೊಂಡಿದ್ದಾರೆ.



# ಹಿರಿಯ ಪತ್ರಕರ್ತ ಹಾಗೂ ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷ ದೊಡ್ಡಬೊಮಯ್ಯ ನಿಧನ

**ಬೆಂಗಳೂರು, ಡಿ.20–** ಹಿರಿಯ ಪತ್ರಕರ್ತ ಹಾಗೂ ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷ ದೊಡ್ಡ ಬೊಮಯ್ಯ ಅವರು ಇಂದು ನಿಧನರಾಗಿದ್ದಾರೆ. ಮೂಲತಃ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ರೊಪ್ಪ ಗ್ರಾಮದ ದೊಡ್ಡಯ್ಯ ಮತ್ತು ಚಿಕ್ಕಮ ದಂಪತಿಯ ಹಿರಿಯ ಪುತ್ರರಾದ ದೊಡ್ಡಬೊಮಯ್ಯ ಅವರು ಈ ಮೊದಲು ಸಂಜೆವಾಣಿ ಮತ್ತು ಪ್ರಸ್ತುತ ಇಂದು ಸಂಜೆ ಪತ್ರಿಕೆಯಲ್ಲಿ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಆಕಾಶವಾಣಿ ಮತ್ತು ದೂರದರ್ಶನದಲ್ಲಿ ಅರೆಕಾಲಿಕ ಸಹಾಯಕ ಸುದ್ದಿ ಸಂಪಾದಕರಾಗಿ ಕೆಲಸ ಮಾಡಿದ್ದರು. ಸುಮಾರು 30 ವರ್ಷ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿದ್ದ ಅವರು, ಅಪಾರವಾದ ಆತ್ಮೀಯ ಬಳಗವನ್ನು ಗಳಿಸಿಕೊಂಡಿದ್ದರು.

ಬೆಳಗಾವಿಯಲ್ಲಿ ನಡೆದ ಚಳಿಗಾಲ ಅಧಿವೇಶನದ ಕಾರ್ಯಕಲಾಪಗಳ ವರದಿಗಾಗಿ ತೆರಳಿದ್ದ ಅವರು ಇಂದು ಬೆಳಗ್ಗೆ ಬೆಂಗಳೂರಿಗೆ ವಾಪಸ್ಸಾಗಿದ್ದರು. ಕೆಎಸ್‌ಆರ್‌ಟಿಸಿ ಬಸ್‌ನಿಂದ ಇಳಿದು, ಬಾಗಲೂರಿನಲ್ಲಿರುವ ತಮ ಮನೆ ತಲುಪಲು ಕೆಂಪೇಗೌಡ ಬಸ್ ನಿಲ್ದಾಣದಲ್ಲಿ ಬಿಎಂಟಿಸಿ ಬಸ್ ಹತ್ತಿ ಕುಳಿತಿದ್ದ ಸಂದರ್ಭದಲ್ಲಿ ತೀವ್ರ ಹೃದಯಾಘಾತವಾಗಿದೆ. ಸಹಪ್ರಯಾಣಿಕರು ಉಪಚರಿಸಿದ ಹೊರತಾಗಿಯೂ ಬಸ್‌ನಲ್ಲಿಯೇ ನಿಧನ ಹೊಂದಿದ್ದಾರೆ.

ಮೃತರು ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷರಾಗಿದ್ದರು. ಪ್ರೆಸ್ ಕ್ಲಬ್ ಪದಾಧಿಕಾರಿಯಾಗಿಯೂ ಸೇವೆ ಸಲ್ಲಿಸಿದ್ದರು.ನಿಧನರಾಗಿರುವ ದೊಡ್ಡಬೊಮಯ್ಯ ಅವರ ನೇತ್ರಗಳನ್ನು ಅವರ ಕುಟುಂಬ ವರ್ಗದವರು ದಾನ ಮಾಡಿ ದುಃಖದಲ್ಲೂ ಮಾನವೀಯತೆ ಮೆರೆದಿದ್ದಾರೆ.

ದೊಡ್ಡಬೊಮಯ್ಯ ಅವರ ನಿಧನಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ರಮೇಶ್‌ಪಾಳ್ಯ, ಸಂಘದ ಪದಾಧಿಕಾರಿಗಳು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಪ್ರೆಸ್‌ಕ್ಲಬ್ ಅಧ್ಯಕ್ಷ ಶ್ರೀಧರ್, ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಬೆಳ್ಳಿತಟ್ಟೆ, ವರದಿಗಾರರ ಕೂಟದ ಅಧ್ಯಕ್ಷ ಆರ್.ಟಿ.ವಿಠಲ ಮೂರ್ತಿ ಸೇರಿದಂತೆ ಹಲವು ಗಣ್ಯರು, ಹಿರಿಯ ಪತ್ರಕರ್ತರು ಶೋಕ ವ್ಯಕ್ತಪಡಿಸಿದ್ದಾರೆ.

**ವಾರ್ತಾ ಇಲಾಖೆಯ ಆಯುಕ್ತರಿಂದ ಸಂತಾಪ :** ಹಿರಿಯ ಪತ್ರಕರ್ತ ದೊಡ್ಡಬೊಮಯ್ಯ ನಿಧನಕ್ಕೆ ವಾರ್ತಾ ಇಲಾಖೆಯ ಆಯುಕ್ತರಿಂದ ಸಂತಾಪ ಹಿರಿಯ ಪತ್ರಕರ್ತರು ಹಾಗೂ ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಉಪಾಧ್ಯಕ್ಷರಾದ ದೊಡ್ಡಬೊಮ್ಮಯ್ಯ ಅವರು ತೀವ್ರ ಹೃದಯಾಘಾತದಿಂದ ನಿಧನರಾಗಿರುವುದು ಅತ್ಯಂತ ದುಃಖಕರ ಸಂಗತಿಯಾಗಿದೆ ಎಂದು ವಾರ್ತಾ ಮತ್ತು



ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಅವರು ತಮ ಸಂತಾಪವನ್ನು ವ್ಯಕ್ತಪಡಿಸಿದ್ದಾರೆ.

ಇಂದು ಸಂಜೆ ಪತ್ರಿಕೆಯಲ್ಲಿ ವರದಿಗಾರರಾಗಿ ಕಾರ್ಯ ನಿರ್ವಹಿಸುತ್ತಿದ್ದ ದೊಡ್ಡಬೊಮಯ್ಯ ಅವರು ದೂರದರ್ಶನ, ಆಕಾಶವಾಣಿ, ಸಂಜೆವಾಣಿ ಸೇರಿದಂತೆ ವಿವಿಧ ಮಾಧ್ಯಮಗಳಲ್ಲಿ ಸತತ 30 ವರ್ಷಗಳಿಗೂ ಹೆಚ್ಚು ಕಾಲ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿದ್ದರು.

ಪತ್ರಿಕೋದ್ಯಮದ ಮೂಲಕ ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದ ಅವರ ಸೇವೆ ಹಾಗೂ ಕಾರ್ಯವೈಖರಿ ಸದಾ ಸರಣೀಯವಾಗಿದೆ. ಬೆಳಗಾವಿಯ ಸುವರ್ಣಸೌಧದಲ್ಲಿ ನಡೆದ ಚಳಿಗಾಲದ ಅಧಿವೇಶನದ ವರದಿಗಾಗಿ ಆಗಮಿಸಿದ್ದ ಅವರು, ಅಧಿವೇಶನ ಮುಗಿಸಿಕೊಂಡು ಡಿ.19ರಂದು ಬೆಳಗಾವಿಯಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಿದ್ದರು. ಬೆಂಗಳೂರಿಗೆ ಆಗಮಿಸಿದ ಬಳಿಕ, ಇಂದು ಮುಂಜಾನೆ ಕೆಂಪೇಗೌಡ ಬಸ್ ನಿಲ್ದಾಣದಿಂದ ಮನೆಗೆ ತೆರಳಲು ಬಿಎಂಟಿಸಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ವೇಳೆ ತೀವ್ರ ಹೃದಯಾಘಾತದಿಂದ ಅವರು ನಿಧನರಾಗಿರುವುದು ಅತ್ಯಂತ ದುಃಖಕರವಾಗಿದೆ.

ಶ್ರೀಯುತರ ಅಗಲಿಕೆಯಿಂದ ಪತ್ರಿಕೋದ್ಯಮ ಕ್ಷೇತ್ರವು ಒಬ್ಬ ಹಿರಿಯ ಹಾಗೂ ಅನುಭವಿ ಪತ್ರಕರ್ತರನ್ನು ಕಳೆದುಕೊಂಡಿದ್ದು, ಇದು ತುಂಬಲಾರದ ನಷ್ಟವಾಗಿದೆ. ಅವರ ಆತಕ್ಕೆ ಶಾಂತಿ ಸಿಗಲಿ. ಹಠಾತ್ ನಿಧನದಿಂದ ದುಃಖದಲ್ಲಿರುವ ಕುಟುಂಬ ಸದಸ್ಯರಿಗೆ ಈ ನೋವನ್ನು ಸಹಿಸುವ ಶಕ್ತಿಯನ್ನು ದೇವರು ನೀಡಲಿ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಪ್ರಾರ್ಥಿಸಿದ್ದಾರೆ.

# ಪಾದಚಾರಿಗೆ ಕಾರು ಡಿಕ್ಕಿ; ಗಂಭೀರ ಗಾಯ



**ಕಮಲನಗರ:ಡಿ.20:** ರಾಷ್ಟ್ರೀಯ ಹೆದ್ದಾರಿ ತಾಲ್ಲೂಕಿನ ಡಿಗ್ಗಿ ಗ್ರಾಮದ ಬಳಿ ಶುಕ್ರವಾರ ಸಂಜೆ ಅಪರಿಚಿತ ಕಾರೋಂದು ಪಾದಚಾರಿಗೆ ಡಿಕ್ಕಿ ಹೊಡೆದ ಪರಿಣಾಮ ಗಂಭೀರ ಗಾಯಗೊಂಡ ಘಟನೆ ಜರುಗಿದೆ. ಹಾಲು ತೆಗೆದುಕೊಂಡು ಮನೆಗೆ ತೆರಳುತ್ತಿದ್ದ ಸಂದರ್ಭದಲ್ಲಿ ಅಪರಿಚಿತ ಕಾರು ಡಿಕ್ಕಿ ಹೊಡೆದ ಪರಿಣಾಮ, ಈ ಅಪಘಾತದಲ್ಲಿ ಭೀಮರಾವ(39) ಎಂಬಾತನನ್ನು ಗಂಭೀರವಾಗಿ ಗಾಯಗೊಂಡ ದುರ್ದೈವಿ ಎಂದು ಗುರುತಿಸಲಾಗಿದೆ. ಗಾಯಗೊಂಡ ಭೀಮರಾವ ಅವರನ್ನು ಕಮಲನಗರ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗಾಗಿ ಬೀದರ್ ಜಿಲ್ಲಾಸ್ಪತ್ರೆಗೆ ಕಳುಹಿಸಲಾಗಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ.ಘಟನಾ ಸ್ಥಳಕ್ಕೆ ಕಮಲನಗರದ ಪಿಎಸ್‌ಐ ಆಶಾ ರಾ ಠೋಡ್, ಎಎಸ್‌ಐ ಡೋಣಗಾಂವ್ ವಸಂತ, ಎಚ್.ಸಿ ಲೋಕೇಶ ತೆಲಂಗ್ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದರು.ಡಿಕ್ಕಿ ಹೊಡೆದು ಪರಾರಿಯಾದ ಕಾರು ಶೋಧ ಕಾರ್ಯ ಪಿಎಸ್‌ಐ ನೇತೃತ್ವದಲ್ಲಿ ತನಿಖೆ ಮುಂದುವರೆದಿದೆ .

# ಬಹುದಿನಗಳ ಬೇಡಿಕೆಯ ನದಿಗಳ ಜೋಡಣೆಗೆ ಪ್ರಕ್ರಿಯೆ ಆರಂಭಿಸಿದ ಕೇಂದ್ರ, ವಿವಿಧ ರಾಜ್ಯಗಳ ಸಚಿವರಿಗೆ ಆಹ್ವಾನ

**ಬೆಂಗಳೂರು, ಡಿ.20–** ಕೇಂದ್ರ ಸರ್ಕಾರ ಬಹುದಿನಗಳ ಬೇಡಿಕೆಯಂತೆ ರಾಷ್ಟ್ರಮಟ್ಟದಲ್ಲಿ ನದಿಗಳ ಜೋಡಣೆಗೆ ಪ್ರಕ್ರಿಯೆ ಆರಂಭಿಸಿದ್ದು, ಅದರ ಕುರಿತಂತೆ ಚರ್ಚಿಸಲು ವಿವಿಧ ರಾಜ್ಯಗಳ ಜಲಸಂಪನ್ಮೂಲ ಸಚಿವರಿಗೆ ಆಹ್ವಾನ ನೀಡಿದೆ.ಅದರಲ್ಲಿ ಕರ್ನಾಟಕದ ಉಪಮುಖ್ಯಮಂತ್ರಿಯೂ ಆಗಿರುವ ಡಿ.ಕೆ.ಶಿವಕುಮಾರ್ ಇದೇ 23 ರಂದು ಮಧ್ಯಾಹ್ನ 3 ಗಂಟೆಗೆ ನಡೆಯುವ ಸಭೆಯಲ್ಲಿ ಭಾಗವಹಿಸುವುದಾಗಿ ತಿಳಿಸಿದ್ದಾರೆ.ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಇದೇ ತಿಂಗಳ 23ರಂದು ದೆಹಲಿಗೆ ಭೇಟಿ ನೀಡುವುದಾಗಿ ತಿಳಿಸಿದರು.

ದೆಹಲಿಯ ಭೇಟಿಯ ವೇಳೆ ಕೇಂದ್ರ ಜಲಶಕ್ತಿ ಸಚಿವರನ್ನು ಮತ್ತು ಅರಣ್ಯ ಸಚಿವರನ್ನು ಭೇಟಿ ಮಾಡಿ ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಅಣೆಕಟ್ಟು, ಮಹಾದಾಯಿ ನದಿಗೆ ಅಡ್ಡಲಾಗಿ ಕಳಸಾ–ಬಂಡೂರಿ ಅಣೆಕಟ್ಟು ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಪರಿಸರ ಇಲಾಖೆಯ ಅನುಮತಿ ಹಾಗೂ ಇತರ ನೆರವುಗಳ ಬಗ್ಗೆ ಚರ್ಚೆ ನಡೆಸುವುದಾಗಿ ತಿಳಿಸಿದ್ದಾರೆ.

ಇದೇ ವೇಳೆ ರಾಷ್ಟ್ರಮಟ್ಟದಲ್ಲಿ ನದಿ ಜೋಡಣೆಗೆ ಸಂಬಂಧಪಟ್ಟಂತೆ ಕೇಂದ್ರ ಸಚಿವರು ನೀರು ಅಭಿವೃದ್ಧಿ ಸಂಸ್ಥೆಯ ಮಹತ್ವದ ಸಭೆ ಕರೆದಿದ್ದಾರೆ. ತಾವು ಅದರಲ್ಲಿಯೂ ಭಾಗವಹಿಸುವುದಾಗಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಕೇಂದ್ರ ನಗರಾಭಿವೃದ್ಧಿ ಸಚಿವರನ್ನು ಭೇಟಿ ಮಾಡಿ ಕೆಲ ವಿಚಾರಗಳನ್ನು ಚರ್ಚಿಸುವುದಾಗಿ ಹೇಳಿದ್ದಾರೆ. ಸಂಸದರ ಜೊತೆ ಕೇಂದ್ರ ಸಚಿವರನ್ನು ಭೇಟಿ ಮಾಡಬೇಕಿತ್ತು. ಆದರೆ ಸದ್ಯಕ್ಕೆ ಸಮಯ ಇಲ್ಲ. ಹಾಗಾಗಿ ತಾವೊಬ್ಬರೇ ಕೇಂದ್ರ ಸಚಿವರನ್ನು ಭೇಟಿ ಮಾಡುತ್ತಿರುವುದಾಗಿ ಹೇಳಿದರು. ಅಂದು ದೆಹಲಿ ಪೊಲೀಸರ ಮುಂದೆ ಹಾಜರಾಗಿ ಹೇಳಿಕೆ ನೀಡುವುದಾಗಿ ತಿಳಿಸಿದ್ದಾರೆ.

ನ್ಯಾಷನಲ್ ಹೆರಾಲ್ಡ್ ಸಂಸ್ಥೆಗೆ ಸಂಬಂಧಪಟ್ಟಂತೆ ಪ್ರಕರಣ ದಾಖಲಿಸಿರುವ ದೆಹಲಿ ಪೊಲೀಸರು ಖುದ್ದು ಹಾಜರಾಗಿ ಹೇಳಿಕೆ ನೀಡುವಂತೆ ಡಿ.ಕೆ.ಶಿವಕುಮಾರ್ ಮತ್ತು ಮಾಜಿ ಸಂಸದ ಡಿ.ಕೆ.ಸುರೇಶ ಅವರಿಗೆ ನೋಟೀಸ್ ನೀಡಿದ್ದರು. ಕಳೆದ ಸೋಮವಾರ ದೆಹಲಿಗೆ ಭೇಟಿ ನೀಡಿದ ಡಿ.ಕೆ.ಶಿವಕುಮಾರ್ ಮತಗಳ್ಳತನದ ವಿರುದ್ಧದ ಪ್ರತಿಭಟನೆಯಲ್ಲಿ ಭಾಗವಹಿಸಿ, ದೆಹಲಿ ಪೊಲೀಸರನ್ನು ಭೇಟಿಯಾಗದೆ ವಾಪಸ್ ಬಂದಿದ್ದರು. ಈಗ ಮಂಗಳವಾರ ದೆಹಲಿಗೆ ತೆರಳಿ ಅಲ್ಲಿನ ಪೊಲೀಸರ ಮುಂದೆ ಹೇಳಿಕೆ ನೀಡುವುದಾಗಿ ತಿಳಿಸಿದ್ದಾರೆ.ನ್ಯಾಷನಲ್ ಹೆರಾಲ್ಡ್ ಪ್ರಕರಣ ಕುರಿತಂತೆ ಜಾರಿ ನಿರ್ದೇಶನಾಲಯ ದಾಖಲಿಸಿದ್ದ ಪ್ರಕರಣವನ್ನು ವಿಚಾರಣಾ ನ್ಯಾಯಾಲಯ ರದ್ದುಗೊಳಿಸಿದೆ. ಆದರೂ ದೆಹಲಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಅದರ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದೇವೆ ಎಂದು ಹೇಳಿದರು.

**ನಾಗಾ ಸಾಧುಗಳ ಆಶೀರ್ವಾದ:**ಇಂದು ನಮ ಮನೆಗೆ ನಾಗಾಸಾಧುಗಳು ಬಂದು ಆಶೀರ್ವಾದ ಮಾಡಿದ್ದಾರೆ. ಹುಡುಕಿಕೊಂಡು ಬಂದು ಆಶೀರ್ವಾದ ಮಾಡುವವರನ್ನು ಬೇಡ ಎನ್ನಲು ಸಾಧ್ಯವೇ? ಸಾಧು–ಸಂತರು, ಹಿರಿಯರು ಸೇರಿದಂತೆ ಎಲ್ಲರೂ ನಮಗೆ ಬೇಕು. ಸರ್ಕಾರದಿಂದ ಮುಜರಾಯಿ ಇಲಾಖೆ ನಡೆಸುತ್ತಿದ್ದೇವೆ. ಚರ್ಚ್, ಮಸೀದಿ ಎಲ್ಲಾ ಧಾರ್ಮಿಕ ಸಂಸ್ಥೆಗಳಿಗೂ ನೆರವು ನೀಡುತ್ತೇವೆ. ಅವರವರ ಧರ್ಮಗಳನ್ನು ಅವರು ಕಾಪಾಡುತ್ತಾರೆ. ಜೈನಮುನಿಗಳ ವೇಷಭೂಷಣ ಒಂದು ರೀತಿ ಇರುತ್ತದೆ. ನಾಗಾಸಾಧುಗಳ ವೇಷಭೂಷಣ ಮತ್ತೊಂದು ರೀತಿ. ಕಾವಿ, ಕಾದಿ ವೇಷ ಭೂಷಣಗಳು ಬೇರೆ ಬೇರೆ ಆಗಿರುತ್ತವೆ ಎಂದರು.

**ಕೇಂದ್ರಕ್ಕೆ ಸವಾಲು:**ಕೇಂದ್ರ ಸರ್ಕಾರ ಮಹಾತ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಹೆಸರನ್ನು ಬದಲಾವಣೆ ಮಾಡುತ್ತಿದೆ. ಸೋನಿಯಾ ಗಾಂಧಿ, ಮನಮೋಹನ್ ಸಿಂಗ್ ಅವರ ಒತ್ತಾಸೆಯ ಮೇರೆಗೆ ರಾಷ್ಟ್ರದ ಅತ್ಯುನ್ನತ ನಾಯಕರಾದ ಮಹಾತಗಾಂಧಿ ಹೆಸರಿನಲ್ಲಿ ಉದ್ಯೋಗ ಖಾತ್ರಿ ಯೋಜನೆ ಜಾರಿಗೊಳಿಸಲಾಯಿತು. ಕೇಂದ್ರ ಸರ್ಕಾರ ಈಗ ಆ ಹೆಸರನ್ನು ಬದಲಾವಣೆ ಮಾಡುತ್ತಿರುವುದು ಖಂಡನಿಯ. ಯೋಜನೆಯನ್ನು ಮುಗಿಸಲು ಕೇಂದ್ರ ಸರ್ಕಾರವೇ ಷಡ್ಯಂತ್ರ ನಡೆಸಿದೆ. ಇದರ ವಿರುದ್ಧ ರಾಷ್ಟ್ರಾದ್ಯಂತ ಆಂದೋಲನ ನಡೆಯಲಿದೆ. ಕೇಂದ್ರ ಸರ್ಕಾರಕ್ಕೆ ಸಾಮರ್ಥ್ಯವಿದ್ದರೆ 500 ರೂಪಾಯಿ ನೋಟಿನಲ್ಲಿರುವ ಗಾಂಧಿ ಫೋಟೋವನ್ನು ಬದಲಾವಣೆ ಮಾಡಲಿ ಎಂದು ಸವಾಲು ಹಾಕಿದರು.



ಪತ್ರಕರ್ತ ದೊಡ್ಡ ಬೊಮಯ್ಯ ಅವರು ಬೆಳಗಾವಿಯ ವಿಧಾನಮಂಡಲದ ಅಧಿವೇಶನದ ವರದಿ ಮುಗಿಸಿ ವಾಪಸ್ ಮರಳುವಾಗ ಮೃತಪಟ್ಟಿರುವುದು ಆಘಾತ ತಂದಿದೆ. ದೇವರು ಅವರ ಕುಟುಂಬಕ್ಕೆ ನೋವು ಭರಿಸುವ ಶಕ್ತಿ ನೀಡಲಿ ಎಂದು ಸಂತಾಪ ಸೂಚಿಸಿದರು.

# ಬಾಲ್ಯ ವಿವಾಹ ನಡೆದರೆ ದೇವಾಲಯ ಸಮಿತಿ ಜೈಲಿಗೆ: ತಹಶೀಲ್ದಾರ್ ಎಚ್ಚರಿಕೆ

**ಅರಸೀಕೆರೆ, ಡಿ. 20–** ಅಪ್ರಾಪ್ತ ಮಕ್ಕಳಿಗೆ ವಿವಾಹ ಮಾಡುವ ಮತ್ತು ಅದನ್ನು ಪ್ರೋತ್ಸಾಹಿಸುವ ಹಾಗೂ ಅದಕ್ಕೆ ಅವಕಾಶವನ್ನು ಒದಗಿಸಿಕೊಡುವ ಮತ್ತು ದೇವಾಲಯಗಳಿಗೆ ಸಂಬಂಧಪಟ್ಟವರು ಸಹ ಜೈಲಿಗೆ ಹೋಗಬೇಕಾಗುತ್ತದೆ ಎಂದು ತಹಶೀಲ್ದಾರ್ ಸಂತೋಷ್‌ಕುಮಾರ್ ಹೇಳಿದರು.

ಇಲ್ಲಿನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಗ್ರಾಮ ಪಂಚಾಯ್ತಿ ಅಧ್ಯಕ್ಷರು ಮತ್ತು ಪಿಡಿಒಗಳಿಗೆ ಬಾಲ್ಯ ವಿವಾಹ ಜಾಗೃತಿ ಮೂಡಿಸುವ ಮತ್ತು ಗ್ರಾಮಗಳಲ್ಲಿ ಬಾಲ್ಯ ವಿವಾಹ ತಡೆಗಟ್ಟಬಹುದು ಎಂಬ ಬಗ್ಗೆ ಏರ್ಪಡಿಸಿದ್ದ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

18 ವರ್ಷ ತುಂಬದ ಹೆಣ್ಣು ಮಕ್ಕಳು, 21 ವರ್ಷ ಪೂರ್ಣಗೊಳ್ಳದ ಗಂಡು ಮಕ್ಕಳಿಗೆ ವಿವಾಹ ಮಾಡುವುದು ಬಾಲ್ಯ ವಿವಾಹ ಎನಿಸುತ್ತದೆ. ಗ್ರಾಮಗಳಲ್ಲಿ ವಿಷಯ ಗೊತ್ತಿಲ್ಲದೆ ಇರುವುದಿಲ್ಲ. ನಮಗೆ ಏಕೆ ಎಂಬ ಧೋರಣೆಯನ್ನು ಬಿಡಬೇಕು ಮತ್ತು ಗ್ರಾಮಗಳಲ್ಲಿ ಹೆಣ್ಣು ಮಕ್ಕಳ ಬಗ್ಗೆಯೂ ನಿಗಾ ವಹಿಸಬೇಕು. ಅವರಿಗೆ ರಕ್ಷಣೆ ಕೊಡುವ ನಿಟ್ಟಿನಲ್ಲಿ ಜನರು ಸಹ ಜಾಗೃತರಾಗಿರಬೇಕು ಎಂದು ಹೇಳಿದರು.

ನಾವು ವಿವಾಹ ಮಾಡುವುದಿಲ್ಲ ಕೇವಲ ನಿಶ್ಚಯ ಮಾಡಿಕೊಳ್ಳುತ್ತಿದ್ದೇವೆ ಎಂಬ ಸಬೂಬು ಹೇಳುವುದು ಉಂಟು.



ಗ್ರಾಮ ಪಂಚಾಯ್ತಿ ಅಧ್ಯಕ್ಷರು, ಪಿಡಿಒ, ಆಶಾ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು ಇಂತಹ ಪ್ರಕರಣಗಳು ನಡೆಯದಂತೆ ಅವಲೋಕಿಸುತ್ತಿರಬೇಕು ಎಂದರು.

ಮುಂಬರುವ ಗಣರಾಜ್ಯೋತ್ಸವ ದಿನದಂದು ಯಾವ ಗ್ರಾಮ ಪಂಚಾಯಿತಿಯಲ್ಲಿ ಬಾಲ್ಯ ವಿವಾಹ ನಡೆದಿಲ್ಲ ಅಂತಹ ಗ್ರಾಮ ಪಂಚಾಯಿತಿ ಅಧ್ಯಕ್ಷರನ್ನು ಸನ್ಮಾನಿಸಲಾಗುವುದು ಎಂದರು.

ಹಾಸನದ ಮಹಿಳಾ ನ್ಯಾಯವಾದಿ ಬಿಂದುಶ್ರೀ ಮಾತನಾಡಿ, ಅರಸೀಕೆರೆ ತಾಲ್ಲೂಕಿನಲ್ಲಿ ಬಾಲ್ಯ ವಿವಾಹ ಹೆಚ್ಚಾಗಿ ಕಂಡು ಬರುತ್ತಿದೆ. ಪೋಷಕರು ಗುಟ್ಟಾಗಿ ಬಾಲ್ಯ ವಿವಾಹ ಮಾಡಿದರು ಸಹ ಹುಡುಗಿ ಗರ್ಭಿಣಿಯಾದ ನಂತರ ಪ್ರಕರಣ ಹೊರಬರುತ್ತದೆ. ಬಾಲ್ಯ ವಿವಾಹ ನಿಷೇಧ ಕಾಯ್ದೆ ಬಹಳ ಕಠಿಣವಾಗಿದ್ದು ಇದಕ್ಕೆ ಕಾರಣಕರ್ತರಾದವರಿಗೆ ಶಿಕ್ಷೆ ಕಟ್ಟಿಟ್ಟ ಬುತ್ತಿ, ಬಾಲ್ಯ ವಿವಾಹ ನಡೆದಾಗ ಅಥವಾ ನಡೆಯುವ ಮುನ್ನ ಮಾಹಿತಿ ಸಿಕ್ಕಿದರೆ ತಕ್ಷಣವೇ ನೀವು 112 ಸಂಪರ್ಕಿಸಿ ಮಾಹಿತಿ ನೀಡಿ, ಮಾಹಿತಿ ಯಾರು ಕೊಟ್ಟರೆಂದು ಯಾರಿಗೂ ಗೊತ್ತಾಗುವುದಿಲ್ಲ ಅದನ್ನು ರಹಸ್ಯವಾಗಿ ಇಡಲಾಗುವುದು. ಅಪ್ರಾಪ್ತ ವಯಸ್ಸಿನಲ್ಲಿ ವಿವಾಹ ಮಾಡುವುದರಿಂದ ಮಕ್ಕಳ ಭವಿಷ್ಯವನ್ನೇ ಹಾಳು ಮಾಡಿದಂತಾಗುತ್ತದೆ. ಬಾಳಿ ಬದುಕಬೇಕಾದ ಅವರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂಬುದನ್ನು ಪೋಷಕರು ಅರಿಯಬೇಕು. ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಶಿಕ್ಷಕರು, ಪಿಡಿಒಗಳು ಮತ್ತು ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ಈ ನಿಟ್ಟಿನಲ್ಲಿ ಹೆಚ್ಚಿನ ನಿಗಾ ವಹಿಸಬೇಕು ಎಂದು ಅವರು ಮನವಿ ಮಾಡಿದರು.

ಬಾಲ್ಯ ವಿವಾಹದ ನಂತರ ಶಿಕ್ಷೆ ಕೊಡಿಸುವುದರಲ್ಲಿ ಅರ್ಥವಿಲ್ಲ. ಅದಕ್ಕೆ ಮುನ್ನ ತಡೆಗಟ್ಟಿದಾಗ ಮಾತ್ರ ಸಾರ್ಥಕವಾಗುತ್ತದೆ. ಬಾಲ್ಯ ವಿವಾಹ ತಾಲ್ಲೂಕಿನಲ್ಲಿ ನಡೆಯದಂತೆ ಪಣ ತೊಡುವ ಕಾರ್ಯ ಎಲ್ಲರಿಂದ ಆಗಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಪ್ರಭಾರ ಅಧಿಕಾರಿ ಯೋಗೇಶ್, ಜಿಲ್ಲಾ ಸಂಯೋಜಕರುಗಳಾದ ಶ್ರೀಪ್ರಿಯ, ರೂಪವತಿ ಮತ್ತಿತರರು ಉಪಸ್ಥಿತರಿದ್ದರು.

# ರಾಮಕ್ಕಮ್ಮ ದೇವಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ದೀಪೋತ್ಸವ



ಧೈರ್ಯದ ದಾರಿ

**ಮಾನ್ವಿ,ಡಿ.20–** ತಾಲೂಕಿನ ಹಿರೇಕೋಟ್ನೆಕಲ್ ,ಭೋಗವಾತಿ ಅವಳಿ ಗ್ರಾಮದಲ್ಲಿನ ರಾಮಕ್ಕಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ನಡೆದ ಕಾರ್ತಿಕ ಮಾಸದ ದೀಪೋತ್ಸವ ಹಾಗೂ ಪ್ರವಚನ ಕಾರ್ಯಕ್ರಮದಲ್ಲಿ ಮಾಜಿ ಸಂಸದ ಬಿ.ವಿ.ನಾಯಕ ಮಾತನಾಡಿ ಗ್ರಾಮದ ಆರಾಧ್ಯ ಶಕ್ತಿ ದೇವತೆಯಾಗಿರುವ ರಾಮಕ್ಕಮ್ಮ ದೇವಿಯು ಅನೇಕ ವರ್ಷಗಳಿಂದ ಭಕ್ತರಿಗೆ ಅನುಗ್ರಹವನ್ನು ನೀಡುತ್ತ ಬಂದಿರುವ ಶಕ್ತಿ ದೇವತೆಯ ದೇವಸ್ಥಾನದ ಜಿರ್ಣೋದರಕ್ಕೆ ಗ್ರಾಮದ ಭಕ್ತರು ಮುಂದಾಗಿದ್ದು ನನ್ನಿಂದಾಗುವ ಸಹಕಾರವನ್ನು ನೀಡುವುದಾಗಿ ಬರವಸೇ ನೀಡಿದರು.

ಅಡವಿ ಅಮರೇಶ್ವರ ಮಠದ ಶ್ರೀ ತೊಂಟದಾರ್ಯ ಮಹಾಸ್ವಾಮಿಗಳು ದಿವ್ಯಸಾನಿದ್ಯವನ್ನು ವಹಿಸಿ ಆರ್ಶಿವಾಚನ ನೀಡಿ ಅಧ್ಯಾತ್ಮಿಕ ಪ್ರವಚನವನ್ನು ಅಲಿಸುವುದರಿಂದ ಪುಣ್ಯ ಪ್ರಾಪ್ತಿಯಾಗುವುದರ ಜೋತೆಗೆ ಮಕ್ಕಳಲ್ಲಿನ ಶರಣರ, ಸಂತರ, ಮಹಾಯೋಗಿಗಳ ಅದರ್ಶ ಜೀವನ ಹಾಗೂ ಅವರ ತತ್ವಗಳ ಬಗ್ಗೆ ತಿಳಿಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಶ್ರೀ ರುದ್ರಯ್ಯಶಾಸ್ತ್ರಿಗಳು ರಾಮಕ್ಕಮ್ಮ ದೇವಿ ಕುರಿತು ಅಧ್ಯಾತ್ಮಿಕ ಪ್ರವಚನ ನೀಡಿದರು. ಸಂಜೆ ಕಾರ್ತಿಕ ದೀಪೋತ್ಸವ ನಡೆಯಿತು.

ಮಾನ್ವಿ ಬಿಜೆಪಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ, ಮುಖಂಡರಾದ ತಿಮ್ಮರೆಡ್ಡಿ ಭೋಗವತಿ, ಅ.ಭಾ.ವೀ. ಲಿಂ. ಮಹಾಸಭಾ ತಾಲೂಕು ಅಧ್ಯಕ್ಷರಾದ ಅರುಣಚಂದಾ , ಜಗದೀಶ ಒತ್ತೂರು, ಉಮೇಶ ಸಜ್ಜನ, ಶಂಭನಗೌಡ,ವಿಜಯ ಕುಮಾರ ಮೇಟಿ,ಚನ್ನಬಸವ ಸುಗನೂರು ಸೇರಿದಂತೆ ಇನ್ನಿತರರು ಇದ್ದರು.

## ವಾಲ್ಮೀಕಿ ಹಗರಣ ಮಾಜಿ ಸಚಿವ ನಾಗೇಂದ್ರಗೆ ಸೇರಿದ 8 ಕೋಟಿ ರೂ ಆಸ್ತಿ ಇ.ಡಿ ಜಪ್ತಿ

**ಬಳ್ಳಾರಿ:ಡಿ,20–** ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿ ಅಕ್ರಮ ಹಣ ವರ್ಗಾವಣೆ ಆರೋಪದಡಿ ಮಾಜಿ ಸಚಿವ, ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರಿಗೆ ಸೇರಿದ 8 ಕೋಟಿ ರು.ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಲಾ ಗಿದೆ ಎಂದು ಜಾರಿ ನಿರ್ದೇಶನಾಲಯ (ಇ.ಡಿ.) ಹೇಳಿದೆಂದು ಪಿಟಿಐ ವರದಿ ಮಾಡಿದೆ.ಜಪ್ತಿ ಮಾಡಲಾದ ಆಸ್ತಿಯಲ್ಲಿ ನಾಲ್ಕು ವಸತಿ ಗೃಹ ಮತ್ತು ವಾಣಿಜ್ಯ ಭೂಮಿ ಹಾಗೂ ಒಂದು ಕಟ್ಟಡವೂ ಸೇರಿದೆ. ಪಿಎಂಎ ಕಾಯ್ದೆಯಡಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಜಾರಿ ನಿರ್ದೇಶ ನಾಲಯ ಹೇಳಿದೆ.ಅಕ್ರಮದಿಂದ ಸಂಪಾದಿಸಿದ ಬಾಕಿ ಹಣ ಪತ್ತೆ ಹಚ್ಚಲು ಸಾಧ್ಯವಾಗಿಲ್ಲ. ಅದನ್ನು ನಾಗೇಂದ್ರ ಅವರು ಮುಚ್ಚಿಟ್ಟಿರಬಹುದು ಅಥವಾ ಖರ್ಚು ಮಾಡಿರಬಹುದು. ಹೀಗಾಗಿ ಅಕ್ರಮಕ್ಕೆ ಸಮನಾದ ಮೌಲ್ಯದ ಆಸ್ತಿ ಮುಟ್ಟು ಗೋಲು ಹಾಕಲಾಗಿದೆ' ಎಂದು ಇ.ಡಿ. ಮಹರ್ಷಿ ವಾಲ್ಮೀಕಿ ಎಸ್.ಟಿ ಅಭಿವೃದ್ಧಿ ನಿಗಮದಡಿ ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ ಮೀಸಲಿಟ್ಟ ಸುಮಾರು 100 ಕೋಟಿ ರು. ದುರುಪಯೋಗ ಆರೋಪದ ಮೇರೆಗೆ ಆಗ ಸಚಿವರಾಗಿದ್ದ ನಾಗೇಂದ್ರರನ್ನು ಬಂಧಿಸಲಾಗಿತ್ತು. ಈಗ ಅವರು ಜಾಮೀನಿನ ಮೇಲೆ ಹೊರಗಿದ್ದಾರೆ ಎಂದಿದೆ.

# ಶ್ರೀ ರಾಮಾಂಜನೇಯ್ಯ ಪಲ್ಲಕ್ಕಿ ಉತ್ಸವ

ಧೈರ್ಯದ ದಾರಿ

**ಮಾನ್ವಿ,ಡಿ.20–** ಪಟ್ಟಣದ ನಾಮಜಗೇರಿ ಗುಡ್ಡ ಮಾರುತಿ ನಗರದ ಶ್ರೀ ರಾಮಾಂಜನೇಯ್ಯ ದೇವಸ್ಥಾನದ 29 ನೇ ವರ್ಷದ ಜಾತ್ರಮಹೋತ್ಸವ ಅಂಗವಾಗಿ ಶುಕ್ರವಾರ ಸಂಜೆ ಎಳ್ಳು ಅಮವಾಸ್ಯೆ ದಿನ ಬೆಳಿಗ್ಗೆ ಶ್ರೀ ರಾಮಾಂಜನೇಯ್ಯ ಮೂರ್ತಿಗೆ ಅಭಿಷೇಕ.ಎಲೆ ಪೂಜೆ,ಹೂವಿನ ಅಲಂಕಾರ, ಮಹಾಮಂಗಳರಾತಿ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು ಸಂಜೆ ಸುಮಂಗಲಿಯರು ಕುಂಭ ಮತ್ತು ಕಳಸಗಳೊಂದಿಗೆ ಗಂಗಾ ಪೂಜೆ ನೆರವೇರಿಸಿ ದೇವಸ್ಥಾನದಲ್ಲಿನ ಶ್ರೀ ರಾಮಾಂಜನೇಯ್ಯ ಉತ್ಸವ ಮೂರ್ತಿಗಳನ್ನು ಅಲಂಕಾರಿಸಿ ಪಲ್ಲಕ್ಕಿಯಲ್ಲಿಟ್ಟು ಡೋಳ್ಳು, ಕೋಲಾಟ ತಂಡಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು.

ಭಕ್ತರಿಗೆ ಅನ್ನದಾಸೋಹ ಸೇವೆ ನಡೆಯಿತು ಜೆ.ಡಿ.ಎಸ್.ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ ಸೇರಿದಂತೆ ಸಾವಿರಾರು ಭಕ್ತರು ,ಶ್ರೀ ರಾಮಾಂಜನೇಯ್ಯಸೇವಾ ಸಮಿತಿಯ ಸದಸ್ಯರು ಭಾಗವಹಿಸಿದರು.



# ಮಾನ್ವಿ ತಾಲೂಕಿನ ಮೂಷ್ಟರು ಗ್ರಾಮದ ಸರ್ಕಾರಿ ಸಹ ಶಿಕ್ಷಕಿ ರಾಜ್ಯಮಟ್ಟಕ್ಕೆ ಆಯ್ಕೆ






ಧೈರ್ಯದ ದಾರಿ

**ಮಾನ್ವಿ,ಡಿ.20–** ರಾಯಚೂರಿನಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಶಾಲೆ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಡೆದ ರಾಯಚೂರು ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಸಹಪಠ್ಯ ಚುಟುವಟಿಕೆ ಸ್ಪರ್ಧೆಯಲ್ಲಿ ತಾಲೂಕಿನ ಮುಷ್ಟೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಝುರೀನಾ ಅವರು ಗಣಿತ ವಿಷಯಕ್ಕೆ ಸಂಬಂಧಿಸಿದ ಕಲಿಕೋಪಕರಣ ಸಿದ್ಧಪಡಿಸುವ ಸ್ಪರ್ಧೆಯಲ್ಲಿ ಭಾಗವಹಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE